ವಿಶ್ವವಾಣಿ
ವಿಶ್ವಾಸವೇ ವಿಶ್ವ

ಪುಟ ತೆರೆದಂತೆ...

ಬುದ್ದಿವಂತಿಕೆಗೆ-ದಡ್ಡತನಕ್ಕೆ ಕಾರಣ: ಕಬ್ಬಿಣ
ಹಿಂದಿರುಗಿ ನೋಡಿದಾಗ
ಡಾ.ನಾ.ಸೋಮೇಶ್ವರ
ಸಂ.ಪುಟ | 6

ನವೆಂಬರ್: ಇದು ಹಕ್ಕೊತ್ತಾಯದ ತಿಂಗಳು
ಲೋಕಮತ
ಲೋಕೇಶ್ ಕಾಯರ್ಗ
ಸಂ.ಗಮ | 7

ದಾರಿದೀಪೋಕ್ತಿ

ನಾಲ್ಕೈದು ಜನ ಕಾಫಿ ಕುಡಿಯುತ್ತಾ ಬೇರೆಯವರ ಬಗ್ಗೆ ಮಾತಾಡುತ್ತಿದ್ದರೆ, ಆ ಗುಂಪಿಗೆ ಸೇರಿಕೊಳ್ಳಬಾರದು. ಕಾರಣ ನೀವು ಎದ್ದ ಹೋದ ಬಳಿಕ ಅವರು ನಿಮ್ಮ ಕುರಿತು ಮಾತಾಡುತ್ತಾರೆ. ನಕಾರಾತ್ಮಕ ವಿಚಾರಗಳನ್ನು ಬಿತ್ತುವವರಿಂದ ಆದಷ್ಟು ದೂರವಿರಬೇಕು.

ವಕ್ರತುಂಡೋಕ್ತಿ

ನೆಮ್ಮದಿ ದಾಂಪತ್ಯದ ಸಣ್ಣ ಕತೆ ಏನು? ಆತ ಹೆಂಡತಿ ಮಾತನ್ನು ಕೇಳಲಾರಂಭಿಸಿದ. ಜೀವನವಿಡೀ ನೆಮ್ಮದಿಯಿಂದ ಬದುಕಿದ.

ಯಾವ ರೈತರನ್ನೂ ಒಕ್ಕಲೆಬ್ಬಿಸುವುದಿಲ್ಲ: ಸಿಎಂ ಅಭಯ | ಸಿಂದಗಿ ವಿರಕ್ತ ಮಠದ ಆಸ್ತಿಗೂ ವಕ್ಫ್ ಬೇಲಿ | ವಿಜಯಪುರ ಡಿಸಿ ಕಚೇರಿ ಎದುರು ರೈತರ ಪ್ರತಿಭಟನೆ ಚಿತ್ರದುರ್ಗದಲ್ಲೂ ಪಹಣಿ ಗೊಂದಲ | ಲ್ಯಾಂಡ್ ಜಿಹಾದ್: ಬಿಜೆಪಿ ಆಕ್ರೋಶ

ಕಾವೇರಿದ ವಕ್ಫ್ ಕಿಚ್ಚು

ವಿಶ್ವವಾಣಿ ಸುದ್ದಿಮನೆ ಬೆಂಗಳೂರು / ವಿಜಯಪುರ

ವಕ್ಫ್ ಆಸ್ತಿ ವಿವಾದ ಸಂಬಂಧ ರೈತರನ್ನು ಒಕ್ಕಲೆಬ್ಬಿಸುವುದಿಲ್ಲವೆಂದು ಮುಖ್ಯಮಂತ್ರಿ ಸಿದ್ದರಾಮಯ್ಯ ಅಭಯ ನೀಡಿದ್ದರೂ, ವಿಜಯಪುರದಲ್ಲಿ ವಕ್ಫ್ ಬೋರ್ಡ್ ಭೂಮಿ ನೋಂದಣಿಯಿಂದ ಆಕ್ರೋಶಗೊಂಡಿರುವ ರೈತರು ಜಿಲ್ಲಾಧಿಕಾರಿ ಕಚೇರಿ ಅಹೋರಾತ್ರಿ ಪ್ರತಿಭಟನೆ ಆರಂಭಿಸಿದ್ದಾರೆ.

ಧಾರವಾಡ, ಗದಗ, ಯಾದಗಿರಿ, ರಾಯಚೂರು, ಕೋಲಾರ ಸೇರಿ ರಾಜ್ಯದ ಹಲವು ಜಿಲ್ಲೆಗಳಲ್ಲಿ ರೈತರ ಜಮೀನು ವಕ್ಫ್ ಹೆಸರಿನಲ್ಲಿ ನೋಂದಣಿಯಾಗಿರುವುದು ಬೆಳಕಿಗೆ ಬರುತ್ತಿದ್ದಂತೆ, ಈ ಜಿಲ್ಲೆಗಳಲ್ಲೂ ಪ್ರತಿಭಟನೆ, ಹೋರಾಟ ಆರಂಭವಾಗಿದೆ.

ಬಿಜೆಪಿ ಸರಕಾರದ ಅವಧಿಯಲ್ಲಿಯೇ ವಕ್ಫ್ ಭೂಮಿ ಸಂಬಂಧ ರೈತರಿಗೆ ನೋಟಿಸ್ ಜಾರಿಯಾಗಿದೆ ಎಂದು ಕಾಂಗ್ರೆಸ್ ತಿರುಗೇಟು ನೀಡಿದ್ದು, ಆರೋಪ, ಪ್ರತ್ಯಾರೋಪಗಳು ತೀವ್ರಗೊಂಡಿವೆ.

→ 4

ವಕ್ಫ್‌ಗೆ ಸರಕಾರದ ಕುಮ್ಮಕ್ಕು: ಜೋಶಿ

ಹುಬ್ಬಳ್ಳಿ: ರಾಜ್ಯದಲ್ಲಿ ವಕ್ಫ್ ಬೋರ್ಡ್ ಲ್ಯಾಂಡ್ ಜಿಹಾದ್ ನಡೆಸುತ್ತಿದ್ದು, ಕಾಂಗ್ರೆಸ್ ಸರಕಾರದ ಕುಮ್ಮಕ್ಕಿದೆ ಎಂದು ಕೇಂದ್ರ ಆಹಾರ ಮತ್ತು ಗ್ರಾಹಕ ವ್ಯವಹಾರಗಳ ಸಚಿವ ಪ್ರಲ್ಹಾದ ಜೋಶಿ ಆಕ್ರೋಶ ವ್ಯಕ್ತಪಡಿಸಿದರು. ವಕ್ಫ್ ಬೋರ್ಡ್ ಲ್ಯಾಂಡ್ ಜಿಹಾದ್ ಕೈಗೊಳ್ಳುವ ಮೂಲಕ ರಾಜ್ಯದಲ್ಲಿ ರೈತರನ್ನು, ಮಠ ಮಾನ್ಯಗಳನ್ನು, ಬಡ ಜನಸಾಮಾನ್ಯರನ್ನು ಹಿಂಸಿಸು ತ್ತಿದೆ. ಇದಕ್ಕೆಲ್ಲ ಕಾಂಗ್ರೆಸ್ ಸರ್ಕಾರದ ಓಲೈಕೆ ರಾಜಕಾರಣವೇ ಕಾರಣ. ಸಿದ್ದರಾಮಯ್ಯ ಸರಕಾರ ಇಸ್ಲಾಂ ಮೂಲಭೂತವಾದಿಗಳ ಬೆಂಬಲಕ್ಕೆ ನಿಂತಿದೆ. ಹೀಗಾಗಿಯೇ ವಕ್ಫ್ ಬೋರ್ಡ್ ಎಲ್ಲಿ ಬೇಕಲ್ಲಿ ರೈತರ ಜಮೀನು ಕಬಳಿಸುತ್ತಿದೆ. 40-50 ವರ್ಷಗಳಿಂದ ಉಳುಮೆ ಮಾಡುತ್ತಿರುವ ಜಮೀನು ನಮಾಜ್ ಮಾಡುತ್ತಿದ್ದ ಸ್ಥಳವೆಂದು ವಶಕ್ಕೆ ತೆಗೆದು ಕೊಳ್ಳಲು ಯತ್ನಿಸಿದೆ. ಇದಕ್ಕೆಲ್ಲ ಅಧಿಕಾರ ಕೊಟ್ಟವರೇ ಕಾಂಗ್ರೆಸ್ಸಿಗರು ಎಂದರು.

ವಿಶ್ವವಾಣಿ ದಿನಪತ್ರಿಕೆ ಹೊರತಂದಿರುವ ದೀಪಾವಳಿ ವಿಶೇಷಾಂಕವನ್ನು ಸಿಎಂ ಸಿದ್ದರಾಮಯ್ಯ ಅವರು ಮಂಗಳವಾರ ಬಿಡುಗಡೆಗೊಳಿಸಿದರು. ಈ ವೇಳೆ ವಿಶ್ವವಾಣಿಯ ಪ್ರಧಾನ ಸಂಪಾದಕ ವಿಶ್ವೇಶ್ವರ ಭಟ್, ಬೋವಿಮಠದ ಶ್ರೀ ಇಮ್ಮಡಿ ಸಿದ್ಧರಾಮೇಶ್ವರ ಸ್ವಾಮೀಜಿ, ವಿಶ್ವವಾಣಿ ಕಾರ್ಯನಿರ್ವಹಣಾಧಿಕಾರಿ ಚಿದಾನಂದ ಕಡಲಾಸ್ಕರ ಇದ್ದರು.

ವಿವರಪುಟ → 5

ಹಬ್ಬಕ್ಕೂ ಮುನ್ನವೇ ಪಟಾಕಿ ದುರಂತ

ಕಾಸರಗೋಡು ದೇಗುಲ ಉತ್ಸವ: 156 ಮಂದಿಗೆ ಗಾಯ, 10 ಜನರು ಗಂಭೀರ

ತಿರುವನಂತಪುರ: ಕೇರಳದ ಕಾಸರಗೋಡಿನ ಅಂಜುತಾಂಬೂಲಂ ವೀರೇರ್‌ಕಾವು ದೇವಸ್ಥಾನದಲ್ಲಿ ಸೋಮವಾರ ಮಧ್ಯರಾತ್ರಿ ಸಂಭವಿಸಿದ ಭೀಕರ ಪಟಾಕಿ ದುರಂತದಲ್ಲಿ 154 ಜನರು ಗಾಯಗೊಂಡಿದ್ದಾರೆ. ಈ ಪೈಕಿ 10 ಜನರ ಪರಿಸ್ಥಿತಿ ಗಂಭೀರವಾಗಿದೆ.

ಉತ್ಸವದಲ್ಲಿ ಸಂಗ್ರಹವಾಗಿದ್ದ ಪಟಾಕಿ ದಾಸ್ತಾನಿಗೆ ಬೆಂಕಿ, 10 ಮಂದಿ ಪರಿಸ್ಥಿತಿ ಗಂಭೀರ

26 ಗಾಯಾಳುಗಳು ಮಂಗಳೂರು ಆಸ್ಪತ್ರೆಗೆ ದಾಖಲು

ನೀಲೇಶ್ವರದ ದೇಗುಲದಲ್ಲಿ ತೆಯ್ಯಂ ಕಟ್ಟೆ ಉತ್ಸವದ ಅಂಗವಾಗಿ ಸಹಸ್ರಾರು ಜನರ ಸಮ್ಮುಖದಲ್ಲಿ ನಡೆದ ಸಿಡಿಮದ್ದು ಪ್ರದರ್ಶನದ ವೇಳೆ ಪಟಾಕಿ ದಾಸ್ತಾನಿಗೆ ಕಿಡಿ ತಗುಲಿ ದಿಢೀರನೆ ಬೆಂಕಿ ವ್ಯಾಪಿಸಿದೆ.

ಅಗ್ನಿಶಾಮಕ ಪಡೆ ಮತ್ತು ಪೊಲೀಸರು ಧಾವಿಸಿ ಬೆಂಕಿ ನಂದಿಸಲು ಹಲವು ಗಂಟೆಗಳ ಕಾಲ ಹೆಣಗಾಡಬೇಕಾಯಿತು.

ದುರಂತ ನಡೆದಿದ್ದು ಹೇಗೆ?

ದೇಗುಲದಲ್ಲಿ ಮೂವಲಂಕುಳಿ ಚಾಮುಂಡಿ ತೆಯ್ಯಂ ಉತ್ಸವದ ಸಿದ್ಧತೆಗಾಗಿ ನಡೆದ ಕುಳಿಚ್ಚು ತೊಟ್ಟಂ ಆಚರಣೆ ವೇಳೆ ಈ ದುರಂತ ನಡೆದಿದೆ. ಈ ಧಾರ್ಮಿಕ ಆಚರಣೆ ನಡೆದ ಸ್ಥಳಕ್ಕೆ 2-3 ಅಡಿ ದೂರದಲ್ಲಿ ನಿಯಮಾವಳಿ ಉಲ್ಲಂಘಿಸಿ 24 ಸಾವಿರ ರು. ಮೌಲ್ಯದ ಭಾರಿ ಪ್ರಮಾಣದ ಪಟಾಕಿಗಳನ್ನು ದಾಸ್ತಾನು ಮಾಡಲಾಗಿತ್ತು. ಸುರಕ್ಷತಾ ಕ್ರಮ ಅನುಸರಿಸದ ಹಿನ್ನೆಲೆಯಲ್ಲಿ ಅವಘಡಕ್ಕೆ ಕಾರಣವಾಗಿದೆ. ಕಿಡಿ ತಾಗದಂತೆ ಪಟಾಕಿಗಳನ್ನು ಕನಿಷ್ಠ ನೂರು ಅಡಿಗಳ ದೂರದಲ್ಲಿ ದಾಸ್ತಾನು ಮಾಡಬೇಕೆಂಬ ನಿಯಮವಿದೆ. ದುರಂತದಲ್ಲಿ ಗಂಭೀರವಾಗಿ ಗಾಯಗೊಂಡ ಮೂವರನ್ನು ಪರಿಯಾರಂ ಆಸ್ಪತ್ರೆಗೆ ದಾಖಲಿಸಲಾಗಿದ್ದು, ಉಳಿದ ಗಾಯಾಳುಗಳನ್ನು ಮಂಗಳೂರು ಸೇರಿದಂತೆ ವಿವಿಧ ಆಸ್ಪತ್ರೆಗಳಿಗೆ ದಾಖಲಿಸಲಾಗಿದೆ. ಈ ಪೈಕಿ 10 ಜನರಿಗೆ ಶೇ.80 ರಷ್ಟು ಸುಟ್ಟಗಾಯಗಳಾಗಿದ್ದು, ಸಾವು-ಬದುಕಿನ ನಡುವೆ ಹೋರಾಡುತ್ತಿದ್ದಾರೆ ಎಂದು ಕಾಸರಗೋಡು ಜಿಲ್ಲಾಧಿಕಾರಿ ತಿಳಿಸಿದ್ದಾರೆ.

ವಿಮಾನಗಳಿಗೆ ಹುಸಿಬಾಂಬ್ ಬೆದರಿಕೆ: ಲೇಖಕನಿಗೆ ಶೋಧ

ಮುಂಬೈ: ಪ್ರಯಾಣಿಕ ವಿಮಾನಗಳಿಗೆ ಇ-ಮೇಲ್ ಮೂಲಕ ಹುಸಿಬಾಂಬ್ ಬೆದರಿಕೆ ಸಂದೇಶ ರವಾನಿಸಿ ತೀವ್ರ ಆತಂಕ ಸೃಷ್ಟಿಸಿರುವ ವ್ಯಕ್ತಿಯ ಗುರುತು ಪೊಲೀಸರಿಗೆ ಪತ್ತೆಯಾಗಿದೆ. ನಾಗಪುರ ಜಗದೀಶ್ ಉಯ್ಕೆ ಎಂಬ 35 ವರ್ಷದ ವ್ಯಕ್ತಿ ಬೆದರಿಕೆ ಸಂದೇಶಗಳ ಮೂಲ ಎಂದು ಕಂಡುಹಿಡಿಯಲಾಗಿದೆ. ನಾಪತ್ತೆಯಾಗಿರುವ ಆರೋಪಿಗಾಗಿ ವಿಶೇಷ ಪೊಲೀಸ್ ತಂಡ ವ್ಯಾಪಕ ಶೋಧನೆ ಕೈಗೊಂಡಿದೆ. ವಿಶೇಷವೆಂದರೆ ಭಯೋತ್ಪಾದನೆ ಬಗ್ಗೆ 2021ರಲ್ಲಿ ಪುಸ್ತಕ ಬರೆದಿದ್ದ ಈ ವ್ಯಕ್ತಿಯನ್ನು ಪೊಲೀಸರು ಬಂಧಿಸಿದ್ದರು. ಉಯ್ಕೆ ಕೃತ್ಯದಿಂದಾಗಿ ಅನೇಕ ವಿಮಾನಗಳು ರದ್ದಾಗಿ, ವಿಳಂಬವಾಗಿ ಮತ್ತು ಮಾರ್ಗ ಬದಲಾವಣೆಯಾಗಿ ಪ್ರಯಾಣಿಕರನ್ನು ಸಂಕಷ್ಟಕ್ಕೆ ಗುರಿಮಾಡಿದೆ. ಈ ಮಧ್ಯೆ, ಏರ್ ಇಂಡಿಯಾದ 32 ವಿಮಾನಗಳಿಗೆ ಮತ್ತೆ ಬಾಂಬ್ ಬೆದರಿಕೆ ಸಂದೇಶ ಬಂದಿದ್ದು, ಭದ್ರತಾ ಪಡೆಗಳು ಕಟ್ಟೆಚ್ಚರ ವಹಿಸಿವೆ.

ಮುಡಾ ಹಗರಣ: ಮಾಜಿ ಆಯುಕ್ತ ಇ.ಡಿ ವಶಕ್ಕೆ

ಬೆಂಗಳೂರು: ಮುಡಾ ಹಗರಣ ನಿವೇಶನ ಹಂಚಿಕೆ ಅಕ್ರಮ ಆರೋಪ ಪ್ರಕರಣಕ್ಕೆ ಸಂಬಂಧ ಮಾಜಿ ಆಯುಕ್ತ ನಟೇಶ್ ಅವರನ್ನು ಜಾರಿ ನಿರ್ದೇಶನಾಲಯ ವಶಕ್ಕೆ ಪಡೆದಿದೆ. ನಟೇಶ್ ಮನೆ ಮೇಲೆ ಸೋಮವಾರ ಇಡಿ ಅಧಿಕಾರಿಗಳು ದಾಳಿ ನಡೆಸಿ ವಿಚಾರಣೆಗೆ ಒಳಪಡಿಸಿದ್ದರು. ಪ್ರಸ್ತುತ ನಟೇಶ್‌ರನ್ನು ಅಧಿಕಾರಿಗಳು ಶಾಂತಿನಗರದ ಇಡಿ ಕಚೇರಿಗೆ ಕರೆದೊಯ್ದಿದ್ದಾರೆ. ವಿಚಾರಣೆಗೆ ಸಹಕರಿಸದ ಹಿನ್ನೆಲೆಯಲ್ಲಿ ನಟೇಶ್ ಅವರನ್ನು ಬಂಧಿಸುವ ಸಾಧ್ಯತೆಯಿದೆ. ನಟೇಶ್ ಮುಡಾ ಆಯುಕ್ತರಾಗಿದ್ದಾಗ ಸಿಎಂ ಪತ್ನಿಗೆ ಸೈಟ್ ಹಂಚಿಕೆಯಾಗಿತ್ತು. ನಟೇಶ್ ವಿರುದ್ಧ ಮುಡಾದಿಂದ 50:50 ಅನುಪಾತದಲ್ಲಿ 928 ನಿವೇಶನಗಳನ್ನು ಅಕ್ರಮ ಹಂಚಿಕೆ ಮಾಡಿದ ಆರೋಪವಿದೆ.

ವಿಚಾರಣೆ ವೇಳೆ ನಾನು ಯಾವುದೇ ತಪ್ಪು ಮಾಡಿಲ್ಲ. ಸರಕಾರದ ಆದೇಶ ಚಾಚೂತಪ್ಪದೇ ಪರಿಪಾಲಿಸಿದ್ದೇನೆ ಎಂದು ಹೇಳಿದ್ದರು.

ದರ್ಶನ್ ಜಾಮೀನು: ಇಂದು ತೀರ್ಪು

ಬೆಂಗಳೂರು: ಚಿತ್ರದುರ್ಗದ ರೇಣುಕಾಸ್ವಾಮಿ ಕೊಲೆ ಪ್ರಕರಣದ ಎರಡನೇ ಆರೋಪಿ ನಟ ದರ್ಶನ್ ಅವರ ಮಧ್ಯಂತರ ಜಾಮೀನು ಅರ್ಜಿಯ ಆದೇಶವನ್ನು ಹೈಕೋರ್ಟ್ ಬುಧವಾರ ಪ್ರಕಟಿಸಲಿದೆ. ಸೋಮವಾರ ಜಾಮೀನು ಅರ್ಜಿ ವಿಚಾರಣೆ ನಡೆಸಿದ ನ್ಯಾ. ವಿಶ್ವಜಿತ್ ಶೆಟ್ಟಿ ಅವರಿದ್ದ ನ್ಯಾಯಪೀಠ, ಸರಕಾರ ಮತ್ತು ಅರ್ಜಿದಾರರ ಪರ ವಕೀಲರ ವಾದ-ಪ್ರತಿವಾದ ಆಲಿಸಿ ಆದೇಶ ಕಾಯ್ದಿರಿಸಿತು.

ಮರಗಳಿಗೆ ಕೊಡಲಿ: ಟಾಕ್ಸಿಕ್‌ಗೆ ಸಂಕಷ್ಟ

ಬೆಂಗಳೂರು: ಯಶ್ ಅಭಿನಯದ ಟಾಕ್ಸಿಕ್ ಸಿನಿಮಾ ಸೆಟ್ ನಿರ್ಮಾಣಕ್ಕಾಗಿ ಸಾವಿರಾರು ಮರಗಳನ್ನು ನಾಶಮಾಡಿದ ಆರೋಪ ಕೇಳಿ ಬಂದ ಬೆನ್ನಲ್ಲೇ ಸ್ಥಳ ಪರಿಶೀಲಿಸಿದ ಅರಣ್ಯ ಸಚಿವರು, ಆರೋಪ ಸಾಬೀತಾದಲ್ಲಿ ತಪ್ಪಿತಸ್ಥರ ವಿರುದ್ಧ ನಿರ್ದಾಕ್ಷಿಣ್ಯ ಕ್ರಮ ಕೈಗೊಳ್ಳುವುದಾಗಿ ಎಚ್ಚರಿಕೆ ನೀಡಿದ್ದಾರೆ. ಟಾಕ್ಸಿಕ್ ಚಿತ್ರದ ಚಿತ್ರೀಕರಣ ಬೆಂಗಳೂರಿನ ಹೊರ ವಲಯದಲ್ಲಿ ನಡೆಯುತ್ತಿದ್ದು, ಅದ್ದೂರಿ ಸೆಟ್ ನಿರ್ಮಿಸಿ ಶೂಟಿಂಗ್ ನಡೆಸಲಾಗುತ್ತಿದೆ. ಈ ಸೆಟ್ ನಿರ್ಮಾಣಕ್ಕೆ ಚಿತ್ರತಂಡ ನೂರಾರು ಮರಗಳನ್ನು ಕಡಿದಿದೆ ಎಂಬ ಆರೋಪ ಕೇಳಿಬಂದಿದೆ.

ಕೈ ಗೊಂಬೆಯಾದ ಕೌನ್ಸಿಲರ್‌ಗಳು

ರಾಮನಗರ: ಚನ್ನಪಟ್ಟಣ ಉಪಚುನಾವಣೆ ಹಿನ್ನೆಲೆಯಲ್ಲಿ ಸಿ.ಪಿ.ಯೋಗೇಶ್ವರ್ ಕಾಂಗ್ರೆಸ್‌ಗೆ ವಲಸೆ ಹೋದ ಬೆನ್ನಲ್ಲೇ ಅವರ ಬೆಂಬಲಿಗರೂ ಬಿಜೆಪಿಗೆ ವಿದಾಯ ಹೇಳುತ್ತಿದ್ದಾರೆ. ರಾಮನಗರ ನಗರಸಭೆಯ ಆರು ಬಿಜೆಪಿ ಸದಸ್ಯರು ಹಾಗೂ ಪಕ್ಷದ ವಿವಿಧ ಪದಾಧಿಕಾರಿಗಳು ಮಾಜಿ ಸಂಸದ ಡಿ.ಕೆ.ಸುರೇಶ್ ಸಮ್ಮುಖದಲ್ಲಿ ಮಂಗಳವಾರ ಕಾಂಗ್ರೆಸ್‌ಗೆ ಸೇರ್ಪಡೆಯಾಗಿದ್ದಾರೆ. ಚನ್ನಪಟ್ಟಣದಲ್ಲಿ ನಮಗೆ ಹುರುಪು ಬಂದಿದೆ, ಯೋಗೇಶ್ವರ್ ಕಾಂಗ್ರೆಸ್‌ಗೆ ಬಂದಿದ್ದು ಅನಿರೀಕ್ಷಿತ. ಅವರಿಗೆ ನಾವು ಸ್ವಾಗತ ಕೋರುತ್ತೇನೆ. ನಮ್ಮಲ್ಲಿ ಯಾವುದೇ ಭಿನ್ನಾಭಿಪ್ರಾಯ ಇಲ್ಲ, ಚುನಾವಣೆಯಲ್ಲಿ ಯೋಗೇಶ್ವರ್ ಗೆಲುವಿಗೆ ಒಗ್ಗಟ್ಟಾಗಿ ದುಡಿಯುತ್ತೇವೆ ಎಂದರು.

ಹಿರಿಯರಿಗಿನ್ನು ಆಯುಷ್ಮಾನ್ ರಕ್ಷೆ

ದೆಹಲಿ: ದೇಶದ 70 ವರ್ಷ ಮೀರಿದ ಹಿರಿಯ ನಾಗರಿಕರಿಗೆ ಉಚಿತ ವೈದ್ಯಕೀಯ ಸೌಲಭ್ಯ ಒದಗಿಸುವ ಆಯುಷ್ಮಾನ್ ಭಾರತ ಯೋಜನೆಯನ್ನು ಪ್ರಧಾನಿ ನರೇಂದ್ರ ಮೋದಿ ಅವರು ಮಂಗಳವಾರ ಚಾಲನೆ ನೀಡಿದ್ದಾರೆ. ಅಲ್ಲದೆ, 9ನೇ ಆಯುರ್ವೇದ ದಿನ ಮತ್ತು ಧನ್ವಂತರಿ ಜನ್ಮದಿನದ ಅಂಗವಾಗಿ 12,850 ಕೋಟಿ ರು. ಅಭಿವೃದ್ಧಿ ಯೋಜನೆಗಳನ್ನು ಅನಾವರಣಗೊಳಿಸಿದ್ದಾರೆ. ಆದರೆ, ದೆಹಲಿ ಮತ್ತು ಪಶ್ಚಿಮ ಬಂಗಾಳ ಸರಕಾರಗಳು ಆಯುಷ್ಮಾನ್ ಭಾರತ ಯೋಜನೆಯನ್ನು ಅನುಷ್ಠಾನಗೊಳಿಸದಿರುವುದರಿಂದ ಅಲ್ಲಿನ ಹಿರಿಯ ನಾಗರಿಕರಿಗೆ ಆರೋಗ್ಯ ಸೇವೆಗಳ ಪ್ರಯೋಜನ ನೀಡಲು ಸಾಧ್ಯವಾಗುತ್ತಿಲ್ಲ ಎಂದು ಮೋದಿ ಟೀಕಿಸಿದ್ದಾರೆ.

ಸಮಾಚಾರ ಸಣ್ಣದಲ್ಲ

ಉಪಾಧ್ಯಕ್ಷರಾಗಿ ಉಮಾ ಆಯ್ಕೆ

ತಿ.ನರಸೀಪುರ: ತುಂಬಲಗ್ರಾಮ ಪಂಚಾಯಿತಿಗೆ ನೂತನ ಉಪಾಧ್ಯಕ್ಷರಾಗಿ ಉಮಾ ಅವಿರೋಧವಾಗಿ ಆಯ್ಕೆಯಾದರು. ತಾಲೂಕು ತುಂಬಲ ಗ್ರಾಮ ಪಂಚಾಯಿತಿಯ ಉಪಾಧ್ಯಕ್ಷರಾಗಿದ್ದ ಸರಸ್ವತಿರವರ ರಾಜೀನಾಮೆಯಿಂದ ತೆರವಾಗಿದ್ದ ಉಪಾಧ್ಯಕ್ಷ ಸ್ಥಾನಕ್ಕೆ ನಡೆದ ಚುನಾವಣೆಯಲ್ಲಿ ಉಪಾಧ್ಯಕ್ಷ ಸ್ಥಾನ ಬಯಸಿ ಉಮಾ ಒಬ್ಬರೇ ನಾಮಪತ್ರ ಸಲ್ಲಿಸಿದ್ದು. ಬೇರೆ ಯಾರು ನಾಮಪತ್ರ ಸಲ್ಲಿಸಿದ ಕಾರಣ ಉಮಾ ಅವರು ಉಪಾಧ್ಯಕ್ಷ ಸ್ಥಾನಕ್ಕೆ ಅವಿರೋಧವಾಗಿ ಆಯ್ಕೆಯಾದರು. ಚುನಾವಣೆ ಅಧಿಕಾರಿಯಾಗಿ ರೇಷ್ಮೆ ಇಲಾಖೆ ಸಹಾಯಕ ನಿರ್ದೇಶಕ ಕೃಷ್ಣಮೂರ್ತಿ ಕರ್ತವ್ಯ ನಿರ್ವಹಿಸಿ ಉಮಾರವರು ಉಪಾಧ್ಯಕ್ಷ ಸ್ಥಾನಕ್ಕೆ ವಿರೋಧವಾಗಿ ಆಯ್ಕೆಯಾಗಿದ್ದಾರೆ ಎಂದು ಘೋಷಣೆ ಮಾಡಿದರು. ನೂತನ ಉಪಾಧ್ಯಕ್ಷ ಉಮಾ ಮಾತನಾಡಿ ನಮ್ಮ ಕಾಂಗ್ರೆಸ್ ಪಕ್ಷದ ವರಿಷ್ಠರು ಹಾಗೂ ಈ ರಾಜ್ಯದ ಮುಖ್ಯಮಂತ್ರಿಗಳು ಆದ ಸಿದ್ದರಾಮಯ್ಯನವರಿಗೆ ಮತ್ತು ಎಂ. ಎಲ್. ಸಿ ಡಾ.ಯತೀಂದ್ರ ಸಿದ್ದರಾಮಯ್ಯ ಅವರಿಗೆ ಹಾಗೂ ನಾನು ಆಯ್ಕೆಗೆ ಕಾರಣರಾದ ಎಲ್ಲಾ ಕಾರ್ಯಕರ್ತರಿಗೂ ಸದಸ್ಯರಿಗೂ ಕೃತಜ್ಞತೆ ಸಲ್ಲಿಸುತ್ತೇನೆ ಎಂದರು. ಈ ಸಂದರ್ಭದಲ್ಲಿ ಸದಸ್ಯರುಗಳಾದ ಪದ್ಮ, ಬಸವರಾಜು, ರತ್ನಮ್ಮ, ಅನಿತಾ, ಶೇಖರ್, ಕಂಬಯ್ಯ, ಸತೀಶ್, ಚಂದ್ರಶೇಖರ್, ಸುಲೋಚನಾ ಪಿಎಂ, ಮಣಿಯಮ್ಮ ಮುಖಂಡರುಗಳಾದ ಮಾಜಿ ತಾಪಂ ಅಧ್ಯಕ್ಷ ಅಂದಾನಿ, ಮಂಜುನಾಥ್, ಗುರುರಾಜು. ತುಂಬಲ ಸುರೇಶ, ಸಿದ್ದರಾಜು.ಸೋಮನಾಥಪುರ ಗಣೇಶ್, ಮಲ್ಲಿಕಾ.ಮಹೇಶ್,ಮರಯ್ಯ, ನಿರಂಜನ್ ,ಮಾಜಿ ಗ್ರಾ.ಪಂ. ಅಧ್ಯಕ್ಷ ಚುಂಚೆಗೌಡ, ಬಸವರಾಜ್, ಸೇರಿದಂತೆ ಮತ್ತಿತರರು ಇದ್ದರು.

ಯೋಗೇಶ್ವರ್ ಗೆಲುವು ಶತಃಸಿದ್ಧ: ಶಾಸಕ

ಮದ್ದೂರು: ಚನ್ನಪಟ್ಟಣ ಉಪಚುನಾವಣೆಯಲ್ಲಿ ಕಾಂಗ್ರೆಸ್ ಅಭ್ಯರ್ಥಿ ಸಿ.ಪಿ.ಯೋಗೇಶ್ವರ್ ಗೆಲುವು ಶತಸಿದ್ಧವಾಗಿದ್ದು ಪಕ್ಷದ ಕಾರ್ಯಕರ್ತರು ಪ್ರತಿ ಗ್ರಾಮಗಳಿಗೆ ತೆರಳಿ ಮತಯಾಚನೆ ಮಾಡುವುದರ ಮೂಲಕ ಮುಖ್ಯಮಂತ್ರಿ ಸಿದ್ದರಾಮಯ್ಯ ಹಾಗೂ ಉಪಮುಖ್ಯಮಂತ್ರಿ ಡಿ.ಕೆ.ಶಿವಕುಮಾರ್ ಅವರಿಗೆ ಶಕ್ತಿ ತುಂಬಬೇಕೆಂದು ಶಾಸಕ ಕೆ.ಎಂ.ಉದಯ್ ತಿಳಿಸಿದರು. ಮದ್ದೂರು ತಾಲೂಕಿನ ಕದಲೂರು ಗ್ರಾಮದ ಪಟ್ಟಲದಮ್ಮ ಸಮುದಾಯ ಭವನದಲ್ಲಿ ಬ್ಲಾಕ್ ಕಾಂಗ್ರೆಸ್ ವತಿಯಿಂದ ಆಯೋಜಿಸಿದ್ದ ಕಾರ್ಯಕರ್ತರ ಸಭೆ ವೇಳೆ ಮಾತನಾಡಿದ ಅವರು ಪಕ್ಷದ ಅಭ್ಯರ್ಥಿ ಸಿ.ಪಿ.ಯೋಗೇಶ್ವರ್ ಅವರ ಗೆಲುವಿಗೆ ಆಡಳಿತಾರೂಢ ಕಾಂಗ್ರೆಸ್ ಪಕ್ಷದ ಹಲವು ಯೋಜನೆಗಳು ಸಹಕಾರಿಯಾಗಿದ್ದು ಸ್ಥಳೀಯ ಕಾರ್ಯಕರ್ತರು ಚನ್ನಪಟ್ಟಣ ವಿಧಾನ ಸಭಾ ಕ್ಷೇತ್ರದ ತಮ್ಮ ಬಂಧುಗಳು, ಸ್ನೇಹಿತರು ಮತ್ತು ಕಾಂಗ್ರೆಸ್ ಕಾರ್ಯಕರ್ತರನ್ನು ಸಂಪರ್ಕಿಸಿ ಪಕ್ಷದ ಅಭ್ಯರ್ಥಿಯ ಗೆಲುವಿಗೆ ತೊಡಗಿಸಿಕೊಳ್ಳುವಂತೆ ಹೇಳಿದರು. ಸಭೆ ವೇಳೆ ಹಾಜರಿದ್ದ ತಾಲೂಕು ಬ್ಲಾಕ್ ಕಾಂಗ್ರೇಶ್ ಅಧ್ಯಕ್ಷ ಚಲುವರಾಜು, ಮನ್‌ಮುಲ್ ಮಾಜಿ ಅಧ್ಯಕ್ಷ ಕದಲೂರು ರಾಮಕೃಷ್ಣ, ಅಜ್ಜಹಳ್ಳಿ ರಾಮಕೃಷ್ಣ ಸಭೆ ವೇಳೆ ಮಾತನಾಡಿದರು. ಈ ವೇಳೆ ಭಾರತೀನಗರ ಬ್ಲಾಕ್ ಕಾಂಗ್ರೆಸ್ ಅಧ್ಯಕ್ಷ ಪಿ.ರಾಜೀವ್, ಮುಖಂಡರಾದ ರಾಮಕೃಷ್ಣೇಗೌಡ, ನಾಗೇಗೌಡ, ಶಂಕರೇಗೌಡ, ಇಂತಿಯಾಜ್ ಉಲ್ಲಾಖಾನ್ ಇತರರಿದ್ದರು.

ಪೋಲಿಯೋ ಜಾಗೃತಿ ಬೈಕ್ ಜಾಥಾ

ಮಡಿಕೇರಿ: ಮಡಿಕೇರಿ ರೋಟರಿ ಮಿಸ್ಟಿ ಹಿಲ್ಸ್ ಮತ್ತು ಮಡಿಕೇರಿ ರೋಟರಿ ವುಡ್ಸ್ ಸಂಯುಕ್ತಾಶ್ರಯದಲ್ಲಿ ನಗರದಲ್ಲಿ ಜಾಗತಿಕ ಪೋಲೀಯೋ ನಿರ್ಮೂಲನ ದಿನದ ಅಂಗಲಾಗಿ ಬೈಕ್ ಜಾಥಾ ಆಯೋಜಿತವಾಗಿತ್ತು. ನಗರದ ಜನರಲ್ ತಿಮ್ಮಯ್ಯ ವೃತ್ತದಲ್ಲಿ ಬೈಕ್ ಜಾಥಾಕ್ಕೆ ಮಡಿಕೇರಿ ಪೊಲೀಸ್ ವೃತ್ತ ನಿರೀಕ್ಷಕ ಅನೂಪ್ ಮಾದಪ್ಪ ಮತ್ತು ಕೊಡಗು ವೈದ್ಯಕೀಯ ವಿಜ್ಞಾನಗಳ ಸಂಸ್ಥೆಯ ಡೀನ್ ಡಾ ಲೋಕೇಶ್ ಹಸಿರು ನಿಶಾನೆ ತೋರುವ ಮೂಲಕ ಚಾಲನೆ ನೀಡಿದರು. ಪೋಲೀಯೋ ಲಸಿಕೆ ಹಾಕಿಸಿಕೊಳ್ಳುವ ಮೂಲಕ ಪೋಲಿಯೋ ನಿರ್ಮೂಲನೆಗೆ ಸಹಕರಿಸುವಂತೆ ಮಡಿಕೇರಿಯ ಮುಖ್ಯರಸ್ತೆ ಮೂಲಕ 32 ಬೈಕ್ ಸವಾರರು ಸಂದೇಶವನ್ನು ಸಾರಿದರು. ಈ ಜಾಥಾವು ಪೋಲಿಯೋ ವಿರೋಧದ ಹೋರಾಟದಲ್ಲಿ ಜಾಗೃತಿ ಮೂಡಿಸುವ ಉದ್ದೇಶವನ್ನು ಹೊಂದಿದೆ. ಎಂದು ಮಿಸ್ಟಿ ಹಿಲ್ಸ್ ಅಧ್ಯಕ್ಷ ಪೊನ್ನಚ್ಚನ ಮಧುಸೂದನ್ ತಿಳಿಸಿದರು, ರೋಟರಿ ಮಿಸ್ಟಿ ಹಿಲ್ಸ್ ಕಾರ್ಯ ದರ್ಶಿ ಕಟ್ಟೆಮನೆ ಸೋನಜಿತ್, ಖಜಾಂಜಿ ಲಿಂಗರಾಜುಸ ರೋಟರಿ ವುಡ್ಸ್ ಅಧ್ಯಕ್ಷ ಹರೀಶ್ ಕಿಗ್ಗಾಲು, ಕಾರ್ಯದರ್ಶಿ ಕಿರಣ್ ಕುಂದೂರು, ರೋಟರಿ ಪ್ರಮುಖರಾದ ಕೆ. ಕೆ ವಿಶ್ವನಾಥ್‌ಪಾಲ್ಗೊಂಡಿದ್ದರು.

ಐದು ದಿನ ಮಹೋತ್ಸವ | ಲಕ್ಷಾಂತರ ಭಕ್ತಾದಿಗಳು ಭೇಟಿ | ಪ್ರಾಧಿಕಾರದಿಂದ ಸಕಲ ಸಿದ್ಧತೆ | ಏಳು ಲಕ್ಷ ಲಾಡು ತಯಾರು

ಮಾದೇಶನ ಬೆಟ್ಟದಲ್ಲಿ ದೀಪಾವಳಿ ಜಾತ್ರೆ ಆರಂಭ

ದೇವನೂರು ಶ್ರೀನಿವಾಸ್ ಚಾಮರಾಜನಗರ

ಹನೂರು ತಾಲೂಕಿನ ಮಲೆ ಮಹದೇಶ್ವರ ಬೆಟ್ಟದಲ್ಲಿ ಅಕ್ಟೋಬರ್ 29 ರಿಂದ ನವೆಂಬರ್ 2ರವರೆಗೆ ಐದು ದಿನಗಳ ಕಾಲ ದೀಪಾವಳಿ ಜಾತ್ರಾ ಮಹೋತ್ಸವ ಜರುಗಲಿದ್ದು ಲಕ್ಷಾಂತರ ಭಕ್ತಾದಿಗಳು ಭೇಟಿ ನೀಡಲಿರುವ ಹಿನ್ನೆಲೆ ಶ್ರೀಮಲೆ ಮಹದೇಶ್ವರ ಅಭಿವೃದ್ಧಿ ಪ್ರಾಧಿಕಾರದ ವತಿಯಿಂದ ಸಕಲ ಸಿದ್ಧತೆ ಮಾಡಿಕೊಳ್ಳಲಾಗಿದೆ.

ದೀಪಾವಳಿ ಜಾತ್ರಾ ಮಹೋತ್ಸವ ಅಕ್ಟೋಬರ್ 29 ರಿಂದ ಪ್ರಾರಂಭವಾಗಲಿದ್ದು ಅಂದು ಮಹದೇಶ್ವರ ಸ್ವಾಮಿಗೆ ವಿಶೇಷ ಪೂಜೆ ನೆರವೇರಿಸಲಾಗುವುದು, 30ರಂದು ದೀಪಾವಳಿ ಪ್ರಯುಕ್ತ ಸ್ವಾಮಿಗೆ ವಿಶೇಷ ಪೂಜೆ ಹಾಗೂ ಎಣ್ಣೆ ಮಜ್ಜನ ಸೇವೆ ವಿವಿಧ ಉತ್ಸವಗಳು ನಡೆಯಲಿದೆ, 31ರಂದು ಸ್ವಾಮಿಗೆ ವಿಶೇಷ ಸೇವೆ ಉತ್ಸವಗಳು ನಡೆಯಲಿದ್ದು ನವೆಂಬರ್ ಒಂದರಂದು ಅಮಾವಾಸ್ಯೆ ವಿಶೇಷ ಪೂಜೆ ಹಾಗೂ ಉತ್ಸವಗಳು ಜರುಗಲಿದೆ. ನವೆಂಬರ್ 2 ರಂದು ಬೆಳಗ್ಗೆ ಮಹಾರಥೋತ್ಸವ ಜರುಗಲಿದ್ದು ಅದೇ ದಿನ ರಾತ್ರಿ ಅಭಿಷೇಕದ ಪೂಜೆ ಮುಗಿದ ನಂತರ ಕೊಂಡೋತ್ಸವ ಜರುಗಲಿದೆ.

ದೀಪಾವಳಿ ಜಾತ್ರಾ ಮಹೋತ್ಸವ ಪ್ರಯುಕ್ತ ಶ್ರೀಕ್ಷೇತ್ರ ಮಲೆ ಮಹದೇಶ್ವರ ಬೆಟ್ಟಕ್ಕೆ ಪಾದಯಾತ್ರೆಯ ಮೂಲಕ ಆಗಮಿಸುವ ಭಕ್ತಾದಿಗಳಿಗೆ ತಾಳುಬೆಟ್ಟದಿಂದ ಮಲೆ ಮಹದೇಶ್ವರ ಬೆಟ್ಟದ ಮಾರ್ಗ ಮಧ್ಯದಲ್ಲಿ 10 ಕಡೆ ಟ್ಯಾಂಕ್ ಮೂಲಕ ಕುಡಿಯುವ ನೀರು ಪೂರೈಕೆ ಮಾಡಲಾಗುತ್ತಿದೆ. ಬೆಟ್ಟದ ಎರಡು ಕಡೆಗಳಲ್ಲಿ ಶುದ್ಧ ಕುಡಿಯುವ ನೀರಿನ ಘಟಕದಲ್ಲಿ ಜನರಿಗೆ ಶುದ್ಧ ನೀರಿನ ವ್ಯವಸ್ಥೆ ಕಲ್ಪಿಸಲಾಗಿದೆ. ದಾಸೋಹ ಭವನದಲ್ಲಿ ವಿಶೇಷ ದಾಸೋಹ ವ್ಯವಸ್ಥೆ ಕಲ್ಪಿಸಲಾಗಿದ್ದು ಒಂದು ಬಾರಿಗೆ 1.5 ಸಾವಿರ ಜನರು ಪ್ರಸಾದ ಸ್ವೀಕರಿಸಬಹುದಾಗಿದೆ ಇದಲ್ಲದೆ ಹಳೆ ದಾಸೋಹ ಭವನದ ಬಳಿ ವಿಶೇಷ ದಾಸೋಹ ಕೇಂದ್ರ ತೆರೆದು ದಿನದ 24 ಗಂಟೆಯೂ ದಾಸೋಹ ಏರ್ಪಡಿಸಲಾಗುತ್ತದೆ.

ದೀಪಾವಳಿ ಜಾತ್ರಾ ಮಹೋತ್ಸವ ಪ್ರಯುಕ್ತ ಹೆಚ್ಚಿನ ಭಕ್ತಾದಿಗಳು ಆಗಮಿಸುವ ನಿರೀಕ್ಷೆ ಇರುವುದರಿಂದ ಸುಮಾರು ಆರರಿಂದ ಏಳು ಲಕ್ಷದವರೆಗೆ ಲಾಡು ತಯಾರು ಮಾಡಿಕೊಳ್ಳಲಾಗುತ್ತಿದೆ. ಈಗಾಗಲೇ ಸುಮಾರು ಮೂರುವರೆ ಲಕ್ಷ ಲಾಡು ತಯಾರು ಮಾಡಿ ಸಂಗ್ರಹ ಮಾಡಲಾಗಿದೆ.

ಮಲೆ ಮಹದೇಶ್ವರ ಬೆಟ್ಟದ ದೇವಸ್ಥಾನವು ದೀಪಾಲಂಕಾರದಿಂದ ಕಂಗೊಳಿಸಿತು.

ರಾಜಗೋಪುರದ ಎಡ ಹಾಗೂ ಬಲಭಾಗದಲ್ಲಿ ನೆರಳಿನ ವ್ಯವಸ್ಥೆ ದೇವರ ದರ್ಶನ ಪಡೆಯಲು ಸರತಿ ಸಾಲಿನಲ್ಲಿ ನಿಲ್ಲುವ ಸ್ಥಳದಲ್ಲಿ ಹಾಗೂ ದಾಸೋಹ ಮುಂಭಾಗದಲ್ಲಿ ಶಾಮಿಯಾನ ಅಳವಡಿಸಲಾಗಿದೆ. ಶ್ರೀಕ್ಷೇತ್ರ ಮಲೆ ಮಹದೇಶ್ವರ ಬೆಟ್ಟದಲ್ಲಿರುವ ಶೌಚಾಲಯದ ಜೊತೆಗೆ ತಾಳು ಬೆಟ್ಟದಲ್ಲಿ 5 ಹಾಗೂ ಶ್ರೀಕ್ಷೇತ್ರ ಮಲೆ ಮಹದೇಶ್ವರ ಬೆಟ್ಟದಲ್ಲಿ ಮೊಬೈಲ್ ತಾತ್ಕಾಲಿಕ ಶೌಚಾಲಯ ವ್ಯವಸ್ಥೆ ಕಲ್ಪಿಸಲಾಗಿದೆ.

ಇದಲ್ಲದೆ ದೇವಸ್ಥಾನದ ಆವರಣ ಹಾಗೂ ಜನಸಂದಣಿ ಇರುವ ಕಡೆ ಟ್ಯಾಂಕ್ ಮೂಲಕ ಶುದ್ಧ ಕುಡಿಯುವ ನೀರು ವ್ಯವಸ್ಥೆ ಕಲ್ಪಿಸಲಾಗಿದೆ ಭಕ್ತಾದಿಗಳು ಶುದ್ಧ ಕುಡಿಯುವ ನೀರನ್ನು ಕೇವಲ ಕುಡಿಯಲು ಬಳಸಬೇಕೆಂದು ಪ್ರಾಧಿಕಾರದ ಸಿಬ್ಬಂದಿಗಳು ಮನವಿ ಮಾಡಿದ್ದಾರೆ.

ದೇವಸ್ಥಾನದ ರಾಜಗೋಪುರ ಮುಂಭಾಗ ಹಾಗೂ ಅತಿಥಿ ಗಣ್ಯರ ಮುಖ್ಯದ್ವಾರ ರಂಗಮಂದಿರ ಹಾಗೂ ಭಕ್ತಾದಿಗಳು ಜನಸಂದಣಿ ಇರುವ ಕಡೆ ಸ್ವಚ್ಛತಾ ಕಾಪಾಡಲು ಹೆಚ್ಚು ಪೌರಕಾರ್ಮಿಕ ಸಿಬ್ಬಂದಿಗಳನ್ನು ನಿಯೋಜಿಸಲಾಗಿದೆ.

350 ಬಸ್: ಶ್ರೀಕ್ಷೇತ್ರ ಮಲೆ ಮಹದೇಶ್ವರ ಬೆಟ್ಟದಲ್ಲಿ ದೀಪಾವಳಿ ಜಾತ್ರಾ ಮಹೋತ್ಸವಕ್ಕೆ ಕೆಎಸ್‌ಆರ್‌ಟಿಸಿ ವತಿಯಿಂದ 350 ಬಸ್ ವ್ಯವಸ್ಥೆ ಮಾಡಲಾಗಿದೆ ವಾಹನಗಳು ಪೆಟ್ಟು ನಿಂತರೆ ದುರಸ್ತಿ ಪಡಿಸಲು 50 ಜನ ತಾಂತ್ರಿಕ ಸಿಬ್ಬಂದಿಗಳನ್ನು ಸಹ ನೇಮಕ ಮಾಡಿಕೊಳ್ಳಲಾಗಿದೆ ಎಂದು ವಿಭಾಗೀಯ ನಿಯಂತ್ರಣ ಅಧಿಕಾರಿ ಅಶೋಕ್ ತಿಳಿಸಿದ್ದಾರೆ.

ಪಾದಯಾತ್ರೆಯ ಮೂಲಕ ಶ್ರೀಕ್ಷೇತ್ರ ಮಲೆ ಮಾದೇಶ್ವರ ಬೆಟ್ಟಕ್ಕೆ ತೆರಳುವ ಭಕ್ತಾದಿಗಳಿಗೆ ರಾಜಗೋಪುರದ ಮಹಾದ್ವಾರದ ಬಳಿ ಪ್ರತ್ಯೇಕ ಕ್ಯೂ ಲೈನ್ 60 ವರ್ಷ ಮೇಲ್ಪಟ್ಟವರಿಗೆ ಆಲಂಬಾಡಿ ಬಸವೇಶ್ವರ ಸ್ವಾಮಿಯ ಸಮೀಪ ಪ್ರತ್ಯೇಕ ಕ್ಯೂ ಲೈನ್, ಅತಿಥಿ ಗಣ್ಯರಿಗೆ ಗೇಟ್ ನಂಬರ್ ನಾಲ್ಕರಲ್ಲಿ ದರ್ಶನಕ್ಕೆ ಅವಕಾಶ ಕಲ್ಪಿಸಲಾಗಿದೆ.

ದ್ವಿಚಕ್ರ ವಾಹನ ನಿರ್ಬಂಧ: ಶ್ರೀಕ್ಷೇತ್ರ ಮಲೆ ಮಾದೇಶ್ವರ ಬೆಟ್ಟದಲ್ಲಿ ದೀಪಾವಳಿ ಜಾತ್ರಾ ಮಹೋತ್ಸವಕ್ಕೆ ಹೆಚ್ಚಿನ ಭಕ್ತಾದಿಗಳು ವಿಚಕ್ರ ವಾಹನದಲ್ಲಿ ಆಗಮಿಸುವ ಹಿನ್ನೆಲೆ ಟ್ರಾಫಿಕ್ ಜಾಮ್ ಉಂಟಾಗಲಿದೆ ಈ ನಿಟ್ಟಿನಲ್ಲಿ ಟ್ರಾಫಿಕ್ ಜಾಮ್ ತಡೆಗಟ್ಟಲು ಅಕ್ಟೋಬರ್ 29ರ ಬೆಳಿಗ್ಗೆ 6 ಗಂಟೆಯಿಂದ ನವೆಂಬರ್ 2ರ ಸಂಜೆ ಆರು ಗಂಟೆಯವರೆಗೆ ಶ್ರೀಕ್ಷೇತ್ರಕ್ಕೆ ದ್ವಿಚಕ್ರ ವಾಹನದಲ್ಲಿ ಹೋಗುವುದನ್ನು ನಿರ್ಬಂಧ ವಿಧಿಸಲಾಗಿದೆ. ದ್ವಿಚಕ್ರ ವಾಹನ ದಲ್ಲಿ ಹೋಗುವ ಭಕ್ತಾದಿಗಳಿಗೆ ಕೌದಳ್ಳಿಯಲ್ಲಿ ತಾತ್ಕಾಲಿಕ ಪಾರ್ಕಿಂಗ್ ವ್ಯವಸ್ಥೆ ಕಲ್ಪಿಸಲಾಗಿದ್ದು ಆನಂತರ ಕೆಎಸ್‌ಆರ್‌ಟಿಸಿ ಬಸ್ ಮುಖಾಂತರ ಶ್ರೀಕ್ಷೇತ್ರಕ್ಕೆ ತೆರಳಲು ವಿಶೇಷ ಬಸ್ ವ್ಯವಸ್ಥೆ ಕಲ್ಪಿಸಲಾಗಿದೆ ಎಂದು ಕಾರ್ಯದರ್ಶಿ ರಘು ತಿಳಿಸಿದ್ದಾರೆ.

> ದೀಪಾವಳಿ ಜಾತ್ರಾ ಮಹೋತ್ಸವ ಪ್ರಯುಕ್ತ ಶ್ರೀ ಕ್ಷೇತ್ರ ಮಲೆ ಮಹದೇಶ್ವರ ಬೆಟ್ಟಕ್ಕೆ ಲಕ್ಷಾಂತರ ಭಕ್ತಾದಿಗಳು ಆಗಮಿಸುವ ಹಿನ್ನೆಲೆ ಬರುವಂತಹ ಭಕ್ತಾದಿಗಳಿಗೆ ಅಗತ್ಯ ಮೂಲಭೂತ ಸೌಲಭ್ಯಗಳನ್ನು ಕಲ್ಪಿಸಲಾಗಿದೆ.
>
> ಎ.ಈ.ರಘು, ಕಾರ್ಯದರ್ಶಿ, ಶ್ರೀಕ್ಷೇತ್ರ ಮಲೆ ಮಹದೇಶ್ವರ ಅಭಿವೃದ್ಧಿ ಪ್ರಾಧಿಕಾರ

ಸೂಕ್ತ ಪೊಲೀಸ್ ಬಂದೋಬಸ್ತ್: ಲಕ್ಷಾಂತರ ಭಕ್ತಾದಿಗಳು ಶ್ರೀಕ್ಷೇತ್ರಕ್ಕೆ ಆಗಮಿಸುವ ನಿರೀಕ್ಷೆ ಇರುವುದರಿಂದ ಯಾವುದೇ ಅಹಿತಕರ ಘಟನೆಗಳು ನಡೆಯದಂತೆ ಮುನ್ನೆಚ್ಚರಿಕೆ ಕ್ರಮವಾಗಿ ಎರಡು ಡಿವೈಎಸ್ಪಿ 7 ಇನ್ಸ್ಪೆಕ್ಟರ್ 34 ಎಸ್ಐ 52 ಎಎಸ್ ಐ, 227 ಪೇದೆಗಳು 38 ಮಹಿಳಾ ಪೇದೆಗಳು 238 ಗೃಹ ರಕ್ಷಕ ದಳದ ಸಿಬ್ಬಂದಿಗಳು 3 ಡಿ ಆರ್, 1 ಕೆಎಸ್ ಆರ್‌ಪಿ ವಾಹನದ ಸಿಬ್ಬಂದಿಗಳನ್ನು ನಿಯೋಜಿಸಲಾಗಿದೆ.

ಸರಕಾರಿ ನೌಕರರ ಸಂಘಕ್ಕೆ 34 ನಿರ್ದೇಶಕರ ಆಯ್ಕೆ

ಪಿರಿಯಾಪಟ್ಟಣ: ಸರಕಾರಿ ನೌಕರರ ಸಂಘದ ತಾಲೂಕು ಘಟಕದ ನಿರ್ದೇಶಕರ ಚುನಾವಣೆ ಸೋಮವಾರ ನಡೆಯಿತು.

ಪಟ್ಟಣದ ಎಸ್.ಕೆ.ಎಸ್.ಟಿ.ಶಾಲೆಯ ಆವರಣದಲ್ಲಿ ಚುನಾವಣೆಯನ್ನು ನಿಗದಿಪಡಿಸಲಾಗಿದ್ದು, ಸಂಘದ ಕಾರ್ಯಕಾರಿ ಮಂಡಳಿಯು 34 ನಿರ್ದೇಶಕರನ್ನು ಹೊಂದಿದ್ದು, ಇದರಲ್ಲಿ 20 ಸ್ಥಾನಗಳಿಗೆ ಅವಿರೋಧವಾಗಿ ಆಯ್ಕೆಗೊಳಿಸಲಾಗಿ ಇನ್ನುಳಿದ 14 ಸ್ಥಾನಗಳಿಗೆ ಚುನಾವಣೆ ನಡೆಸಲಾಗಿ ಸಾರ್ವಜನಿಕ ಶಿಕ್ಷಣ ಇಲಾಖೆ ಆಡಳಿತ ಕಚೇರಿಯ ಒಂದು ಸ್ಥಾನಕ್ಕೆ ಎನ್. ರವೀಂದ್ರ ಹಾಗೂ ಪುಟ್ಟರಾಜ್ ತಲಾ 24 ಮತಗಳನ್ನು ಪಡೆದು ಸಮಬಲ ಸಾಧಿಸಿದರು ನಂತರ ಲಾಟರಿ ಮೂಲಕ ಎನ್.ರವೀಂದ್ರ ಆಯ್ಕೆಯಾದರು.

ಪ್ರಾಥಮಿಕ ಶಾಲಾ ವಿಭಾಗದಿಂದ ನಿಗದಿಗೊಳಿಸಿದ 5 ಸ್ಥಾನಗಳಲ್ಲಿ ಧನಪಾಲ್, ಎಂ.ಡಿ. ದೇವರಾಜ್, ಬಸವರಾಜ್, ಡಿ.ಗಿರೀಶ್, ಕೆ.ಎಲ್.ದೇವರಾಜ್, ಪ್ರೌಢಶಾಲಾ ವಿಭಾಗದಿಂದ ಪಿ.ವಿ.ದೇವರಾಜ್, ನಂಜುಂಡಸ್ವಾಮಿ, ರಮೇಶ್, ಕಂದಾಯ ಇಲಾಖೆಯಿಂದ ನವೀನ್ ರಾವ್, ಶೇಖರ್, ನಿರಂಜನ್ ಮೆಂಡ್ರಗುತ್ತಿ, ತೋಟಗಾರಿಕೆ ಹಾಗೂ ರೇಷ್ಮೆ ಇಲಾಖೆಯಿಂದ ಎಂ.ಸಿ.ಪ್ರಸಾದ್, ಸರ್ವೆ ಇಲಾಖೆಯಿಂದ ಎಸ್.ಪಿ.ರವಿಚಂದ್ರ ರವರು ಜಯಗಳಿಸಿದರು,



ಪಿರಿಯಾಪಟ್ಟಣ ತಾಲೂಕು ಸರಕಾರಿ ನೌಕರರ ಸಂಘಕ್ಕೆ 34 ನಿರ್ದೇಶಕರ ಆಯ್ಕೆಯಾದರು.

ಇನ್ನುಳಿದಂತೆ ತಾಂತ್ರಿಕ ಶಿಕ್ಷಣ ಇಲಾಖೆಯಿಂದ ಸೋಮಶೇಖರ್, ಆರೋಗ್ಯ ಇಲಾಖೆಯಿಂದ ಅಣ್ಣೇಗೌಡ, ರವಿಕುಮಾರ್, ಕೆ.ಆರ್.ಪ್ರಕಾಶ್, ಬಿ.ಎಲ್.ಉಷಾ, ಎಂ.ಶ್ರೀನಿವಾಸ್ , ಕೃಷಿ ಇಲಾಖೆ ಇಲಾಖೆಯಿಂದ ಸಿ.ಆರ್. ಮಹೇಶ್, ಪಂಚಾಯತ್ ರಾಜ್ ಇಲಾಖೆಯಿಂದ ಎನ್.ಎಸ್.ವಿಶ್ವನಾಥ್, ಕೆ.ಸುರೇಶ್, ಇನ್ನುಳಿದ ಇಲಾಖೆಗಳಿಂದ ಕೆ.ಎಸ್.ಸಣ್ಣಸ್ವಾಮಿ, ಆರ್.ರಮೇಶ್, ಶ್ರೀನಿವಾಸ್ ಮೂರ್ತಿ, ಉಮೇಶ್, ಜೆ.ಎನ್.ಕುಮಾರ್, ಮಂಜುನಾಥ್, ಕೆ.ಎ.ರಾಜೇಶ್, ಆರ್.ನಾಗೇಶ್, ಕೃಷ್ಣೇಗೌಡ ಕೆ.ಎ.ಕುಮಾರ್, ಅವಿರೋಧವಾಗಿ ಆಯ್ಕೆಯಾಗಿದ್ದಾರೆ ಎಂದು ಚುನಾವಣಾಧಿಕಾರಿಯಾಗಿ ಕರ್ತವ್ಯ ನಿರ್ವಹಿಸಿದ್ದ ಮಹಾದೇವ್ ಹಾಗೂ ಸಹಾಯಕ ಚುನಾವಣಾಧಿಕಾರಿ ಎಂ.ಶಿವಣ್ಣ ಇವರಿಗೆ ಪ್ರಮಾಣ ಪತ್ರ ನೀಡಿ ಶುಭ ಕೋರಿದರು.

ಈ ಸಂದರ್ಭದಲ್ಲಿ ಸರ್ಕಾರಿ ನೌಕರರ ಸಂಘದ ಮಾಜಿ ಅಧ್ಯಕ್ಷರಾದ ಮೋಹನ್ ಕುಮಾರ್, ಈ.ಬಿ.ವೆಂಕಟೇಶ್, ಪ್ರಾಥಮಿಕ ಶಾಲಾ ಶಿಕ್ಷಕರ ಸಂಘದ ಮಾಜಿ ಅಧ್ಯಕ್ಷರಾದ ಗಣೇಶ್ ಕುಮಾರ್, ರಾಮಚಂದ್ರ, ವಿವಿಧ ಇಲಾಖೆಗಳ ನೌಕರರು ಹಾಗೂ ಶಿಕ್ಷಕರರು ಉಪಸ್ಥಿತರಿದ್ದರು.

ಕಾಡಾನೆ ದಾಳಿಯಿಂದ ಬೆಳೆ ನಾಶ

ಮಡಿಕೇರಿ: ವಿರಾಜಪೇಟೆ ತಾಲೂಕಿನ ಚೆಂಬೆಬೆಳ್ಳೂರು ಗ್ರಾಮ ಪಂಚಾಯಿತಿ ವ್ಯಾಪ್ತಿಯ ಪುದುಕೋಟೆ ಭಾಗದಲ್ಲಿ ಕಾಡಾನೆಗಳ ಹಾವಳಿ ಮಿತಿ ಮೀರಿದೆ. ಗದ್ದೆಗಳಿಗೆ ನುಗ್ಗಿರುವ ಕಾಡಾನೆಗಳ ಹಿಂಡು ಫಸಲನ್ನು ನಾಶಪಡಿಸಿವೆ.

ಸ್ಥಳೀಯ ಕಾಫಿ ತೋಟಗಳಲ್ಲಿ ಬೀಡು ಬಿಟ್ಟಿರುವ ಕಾಡಾನೆಗಳು ತೋಟ ಮತ್ತು ಗದ್ದೆಗಳಲ್ಲಿನ ಫಸಲನ್ನು ತಿಂದು ತೇಗುತ್ತಿವೆ. ಗ್ರಾಮದ ಬೆಳೆಗಾರರಾದ ಕೆ. ಕುಮಾರ್, ಪೋರ್ಕಂಡ ನಾಚಪ್ಪ, ಮಂಡೇಪಂಡ ಜಾಲಿ ಮತ್ತಿತರರ ಗದ್ದೆಗಳಿಗೆ ಕಾಡಾನೆಗಳು ಹಾನಿ ಮಾಡಿವೆ.

ನಿರಂತರ ಕಾಡಾನೆಗಳ ಹಾವಳಿಯಿಂದ ನೆಮ್ಮದಿ ಇಲ್ಲದಂತ್ತಾಗಿದೆ ಎಂದು ಬೆಳೆಗಾರರು ಅಸಮಾಧಾನ ವ್ಯಕ್ತಪಡಿಸಿದ್ದಾರೆ.

ಅರಣ್ಯ ಇಲಾಖೆ ಕಾರ್ಯಾಚರಣೆ ನಡೆಸಿದರೂ ಕಾಡಾನೆಗಳು ಒಂದು ಭಾಗದಿಂದ ಮತ್ತೊಂದು ಭಾಗಕ್ಕೆ ಸ್ಥಳಾಂತರಗೊಳ್ಳುತ್ತಿವೆಯೇ ಹೊರತು ಕಾಡಿಗೆ ಮರಳುತ್ತಿಲ್ಲ. ಪ್ರತಿವರ್ಷ ಈ ಗ್ರಾಮಗಳಲ್ಲಿ ಕಾಡಾನೆಗಳು ಉಪಟಳ ನೀಡುತ್ತಿವೆ. ನಾಟಿ ಮಾಡಿದ ಮರುದಿನೇ ಕಾಡಾನೆಗಳು ದಾಳಿ ಮಾಡುತ್ತಿವೆ. ಮರುನಾಟಿ ಮಾಡಿ ಫಸಲಿಗಾಗಿ ಎದುರು ನೋಡುತ್ತಿರುವಾಗಲೇ ಮತ್ತೆ ಕಾಡಾನೆಗಳು ಹಾನಿ ಪಡಿಸುತ್ತಿವೆ. ಬೆಳೆಹಾನಿಗಾಗಿ ಕೃಷಿಕರು ಅರ್ಜಿ ಸಲ್ಲಿಸಿ ಒಂದು ವರ್ಷ ಕಳೆದರೂ ಪರಿಹಾರ ದೊರೆತ್ತಿಲ್ಲ ಎನ್ನುವ ಆರೋಪವಿದೆ.

ಕಾಡಾನೆ ದಾಳಿಯಿಂದ ಬೆಳೆ ನಾಶವಾಗಿರುವ ದೃಶ್ಯ

ಕಾಡಾನೆಗಳ ಉಪಟಳ ತಡೆಗೆ ಶಾಶ್ವತವಾದ ವೈಜ್ಞಾನಿಕ ಪರಿಹಾರ ಕಂಡುಕೊಳ್ಳದಿದ್ದಲ್ಲಿ ಬೆಳೆಗಾರರ ಸಂಕಷ್ಟ ದೂರವಾಗುವುದಿಲ್ಲವೆಂದು ಕೃಷಿಕರು ತಿಳಿಸಿದ್ದಾರೆ.

ಚನ್ನಪಟ್ಟಣ, ರಾಮನಗರ ಅವಳಿ ನಗರ

ರಾಮನಗರ: ಅಭಿವೃದ್ಧಿ ಮಾಡುವುದು ಎಂದರೆ ಯಾವುದೋ ದುರುದ್ದೇಶಕ್ಕೆ ಬೆಂಗಳೂರಿಗೆ ಸೇರುವುದಲ್ಲ, ಆಯಾ ಪ್ರದೇಶಗಳನ್ನು ಆಯಾ ಬೌಗೋಳಿಕ ವ್ಯಾಪ್ತಿಯಲ್ಲಿಯೇ ವಿಸ್ತೃತವಾಗಿ ಅಭಿವೃದ್ಧಿ ಮಾಡುವುದು ಎಂದು ಕೇಂದ್ರ ಸಚಿವ ಎಚ್.ಡಿ.ಕುಮಾರಸ್ವಾಮಿ ವಿರೋಧಿಗಳಿಗೆ ಟಾಂಗ್ ನೀಡಿದರು.

ಚನ್ನಪಟ್ಟಣ ಕ್ಷೇತ್ರದ ನೀಲಕಂಠನಹಳ್ಳಿಯಲ್ಲಿ ಸಾರ್ವಜನಿಕರನ್ನು ಉದ್ದೇಶಿಸಿ ಮಾತನಾಡಿದ ಅವರು, ಹುಬ್ಬಳ್ಳಿ ಧಾರವಾಡ ಮಾದರಿಯಲ್ಲಿ ಚನ್ನಪಟ್ಟಣ ಮತ್ತು ರಾಮನಗರ ಪಟ್ಟಣಗಳನ್ನು ಅವಳಿ ನಗರಗಳನ್ನಾಗಿ ಅಭಿವೃದ್ಧಿ ಮಾಡಲಾಗುವುದು ಅವಳಿ ಪಟ್ಟಣಗಳನ್ನು ಅವಳಿ ನಗರಗಳನ್ನಾಗಿ ಪರಿವರ್ತಿಸಲಾಗುವುದು. ಇದರಿಂದ ಈ ಭಾಗದ ಆರ್ಥಿಕತೆಗೆ ಶಕ್ತಿ ಬರುವುದರ ಜತೆಗೆ ಜನಜೀವನ ಮಟ್ಟವೂ ಸುಧಾರಿಸುತ್ತದೆ ಎಂದರು.

ಚನ್ನಪಟ್ಟಣ ಕ್ಷೇತ್ರದಲ್ಲಿ ಒಳಚರಂಡಿ ವ್ಯವಸ್ಥೆ ಆಗಿಲ್ಲ. ನಾನು ಸಿಎಂ ಆಗಿದ್ದಾಗ ಯೋಜನೆಗೆ ಒಪ್ಪಿಗೆ ನೀಡಿದ್ದೆ. 97 ಕೋಟಿ ಹಣ ಬಿಡುಗಡೆಯಾಗಿ ಮೂರು ವರ್ಷವಾಗಿದೆ. ಟೆಂಡರ್ ಕರೆದು ಹಣ ಬಿಡುಗಡೆ ಮಾಡಿದರೆ ಕೆಲಸ ಆಗುತ್ತಿದೆ. ಅದನ್ನು ಮಾಡುವುದು ಬಿಟ್ಟು ಗುತ್ತಿಗೆದಾರರಿಗೆ 'ಮನೆ ಹತ್ತಿರ ಬಂದು ನೋಡಿ' ಎಂದು ತಾಕೀತು ಮಾಡುತ್ತಿದ್ದಾರೆ. ಅವರ ಕಮೀಶನ್ ದುರಾಸೆಗೆ ಯುಜಿಡಿ ಯೋಜನೆ ನೆನೆಗುದಿಗೆ ಬಿದ್ದಿದೆ ಎಂದು ದೂರಿದರು.

ದಲಿತರನ್ನು ಉದ್ಧಾರ ಮಾಡುತ್ತೇವೆ ಎನ್ನುತ್ತಾರೆ. ಆದರೆ ವಾಲ್ಮೀಕಿ ನಿಗಮದಲ್ಲಿದ್ದ ಪರಿಶಿಷ್ಟ ಜಾತಿ, ವರ್ಗದವರ ಹಣವನ್ನು ಅಕ್ರಮವಾಗಿ ವರ್ಗಾವಣೆ ಮಾಡಿ ತೆಲಂಗಾಣ, ಬಳ್ಳಾರಿ ಚುನಾವಣೆಗಳಿಗೆ ಬಳಕೆ ಮಾಡಿಕೊಳ್ಳುತ್ತಾರೆ. ದುರ್ಬಲರನ್ನು ಉದ್ಧಾರ ಮಾಡುವುದು ಎಂದರೆ ಹೀಗೆನಾ?

ಪುತ್ರ ನಿಖಿಲ್ ಪರ ಕೇಂದ್ರ ಸಚಿವ ಎಚ್.ಡಿ.ಕುಮಾರಸ್ವಾಮಿ ಪ್ರಚಾರ ನಡೆಸಿದರು.

> ನೀಲಕಂಠನಹಳ್ಳಿ ಗ್ರಾಮದ ಹೆಣ್ಣು ಮಕ್ಕಳು ಗಾರ್ಮೆಂಟ್ಸ್ ಕಾರ್ಖಾನೆ ಬೇಕೆಂದು ಕೇಳಿದ್ದಾರೆ. ಅವರ ಮನವಿ ನಾನು ಸ್ಪಂದಿಸುತ್ತೇನೆ. ಹೆಣ್ಣು ಮಕ್ಕಳಿಗೆ ಟೈಲರಿಂಗ್ ತರಬೇತಿ ಕೊಡಿಸಿ, ಗಾರ್ಮೆಂಟ್ಸ್ ಕಾರ್ಖಾನೆ ಸ್ಥಾಪನೆ ಮಾಡುವ ಬಗ್ಗೆ ಗಂಭೀರವಾಗಿ ಪರಿಶೀಲಿಸಿ ಪ್ರಯತ್ನ ಮಾಡುತ್ತೇನೆ.
>
> ಎಚ್.ಡಿ.ಕುಮಾರಸ್ವಾಮಿ, ಕೇಂದ್ರ ಸಚಿವ

ಎಂದು ಅವರು ಖಾರವಾಗಿ ಪ್ರಶ್ನಿಸಿದರು.

ಮೈಸೂರು ಕೊಡಗು ಸಂಸದ ಯದುವೀರ್ ಕೃಷದತ್ತ ಒಡೆಯರ್, ಮಾಜಿ ಸಚಿವ ಸಾ.ರಾ.ಮಹೇಶ್, ಮಾಜಿ ಶಾಸಕರಾದ ಡಾ.ಅನ್ನದಾನಿ, ಚೌಡರೆಡ್ಡಿ ತೂಪಲ್ಲಿ, ನಿಸರ್ಗ ನಾರಾಯಣಸ್ವಾಮಿ, ವಿಧಾನ ಪರಿಷತ್ ಸದಸ್ಯ ಭೋಜೇಗೌಡ, ಸೇರಿದಂತೆ ಅನೇಕ ನಾಯಕರು ಪ್ರಚಾರದಲ್ಲಿ ಪಾಲ್ಗೊಂಡಿದ್ದರು.

ಸಮ್ಮೇಳನದಲ್ಲಿ ಕನ್ನಡ ಪದ್ಯಗಳು ಮಾರ್ದನಿಸಲಿ

ಮಂಡ್ಯ: ಕನ್ನಡ ಪದ್ಯಗಳ ಹಾಡಿನ ಸೌಂದರ್ಯ ಶ್ರೀಮಂತವಾಗಿದೆ. ಹಾಡುಗಳು ಛಂದೋಗತಿಯನ್ನು ಹೊಂದಿವೆ. ಕನ್ನಡ ಸಾಹಿತಿಗಳು ರಚಿಸಿರುವ ಇಂತಹ ಸಾವಿರಾರು ಹಾಡುಗಳಿವೆ. ಅವುಗಳಲ್ಲಿ 100 ಹಾಡುಗಳನ್ನು ಆಯ್ಕೆ ಮಾಡಿ ಪ್ರಾಥಮಿಕ, ಮಾಧ್ಯಮಿಕ, ಪ್ರೌಢ ಹಾಗೂ ಪದವಿಪೂರ್ವ ಕಾಲೇಜು ವಿದ್ಯಾರ್ಥಿಗಳ ಮೂಲಕ ಹಾಡಿಸುವುದರಿಂದ ಸಮ್ಮೇಳನದ ನೆನಪಿನಲ್ಲಿ ಕನ್ನಡ ಹಾಡುಗಳು ಮಾರ್ದನಿಸಲಿ ಎಂದು ಖ್ಯಾತ ವಾಗ್ಮಿ ಪ್ರೊ.ಎಂ.ಕೃಷ್ಣೇಗೌಡ ಸಲಹೆ ನೀಡಿದರು.

ನಗರದ ಎಸ್.ಬಿ.ಸಮುದಾಯ ಭವನದಲ್ಲಿ ಜಿಲ್ಲಾ ಕನ್ನಡ ಸಾಹಿತ್ಯ ಪರಿಷತ್ ವತಿಯಿಂದ ಕನ್ನಡ ಭಾಷಾ ಶಿಕ್ಷಕರು ಮತ್ತು ಉಪನ್ಯಾಸಕರಿಗೆ 87 ನೇ ಅಖಿಲ ಭಾರತ ಕನ್ನಡ ಸಾಹಿತ್ಯ ಸಮ್ಮೇಳನದ ಮಹತ್ವದ ಅರಿವು-ಸಂವಾದ ಕಾರ್ಯಕ್ರಮದಲ್ಲಿ ಮಾತನಾಡಿದರು.

ತೆಲುಗಿನಂತೆ ಕನ್ನಡವೂ ಸಹ ಒಂದು ಸಂಗೀತದ ಭಾಷೆಯಾಗಿದೆ ಈ ಭಾಷೆಯಲ್ಲಿ ಒಂದು ಲಯವಿದೆ. ಕನ್ನಡದಲ್ಲಿ ಕನಿಷ್ಠ 5-6 ಸಾವಿರ ಲಯ ವಿನ್ಯಾಸಗಳಿವೆ. ಕನ್ನಡ ಅಧ್ಯಾಪಕರು ಉತ್ತಮ ಹಾಡುಗಳನ್ನು ಅಭ್ಯಾಸ ಮಾಡಿ ಮಕ್ಕಳಿಗೆ ಚಂದವಾಗಿ ಓದುವುದನ್ನು ಕಲಿಸಿ ನಂತರ ಸ್ಪರ್ಧೆ ನಡೆಸಿ ಆಯ್ಕೆ ಮಾಡಿ ಎಂದು ಸೂಚಿಸಿದರಲ್ಲದೆ, ಕನ್ನಡ ಕವಿಗಳ ಹಲವಾರು ಪದ್ಯಗಳನ್ನು ಓದುವುದರ ಮೂಲಕ ಅಧ್ಯಾಪಕರಿಗೆ ಮಾರ್ಗದರ್ಶನ ನೀಡಿದರು.

ಹೋಬಳಿ,ತಾಲ್ಲೂಕು ಮತ್ತು ಜಿಲ್ಲಾ ಮಟ್ಟದಲ್ಲಿ ಕನ್ನಡ ಪದ್ಯ ಓದುವ ಸ್ಪರ್ಧೆಗಳನ್ನು ಏರ್ಪಡಿಸ ಬೇಕು. ಇದರಿಂದ ಸಮ್ಮೇಳನಕ್ಕೆ ಪೂರಕವಾಗಿ ಕನ್ನಡ ವಾತಾವರಣ ನಿರ್ಮಾಣವಾಗುತ್ತದೆ. ವಿಜೇತರಾದವರಿಗೆ ಸಮ್ಮೇಳನದಲ್ಲಿ ಉತ್ತಮ ಬಹುಮಾನ ನೀಡಬೇಕು ಎಂದರು.

ಕಾರ್ಯಕ್ರಮದಲ್ಲಿ ಕಸಾಪ ಜಿಲ್ಲಾ ಕಾರ್ಯದರ್ಶಿ ಹುಸ್ಕೂರು ಕೃಷ್ಣೇಗೌಡ, ಸಹಕಾರ್ಯದರ್ಶಿ ಬಸವೇಗೌಡ ಖರಡ್ಯ, ತಾಲೂಕು ಕಸಾಪ ಅಧ್ಯಕ್ಷ ಚಂದ್ರುಲಿಂಗು, ಪದವಿ ಪೂರ್ವ ಕಾಲೇಜು ಕನ್ನಡ ಉಪನ್ಯಾಸಕರ ವೇದಿಕೆ ಅಧ್ಯಕ್ಷ ಲೋಕೇಶ್ ಬೆಕ್ಕಳಲೆ, ಕವಿ, ಉಪನ್ಯಾಸಕ ಕೆ.ಪಿ.ಮೃತ್ಯುಂಜಯ, ಜಿಲ್ಲಾ ಪ್ರೌಢಶಾಲಾ ಶಿಕ್ಷಕರ ಸಂಘದ ಮಾಜಿ ಕಾರ್ಯದರ್ಶಿ ಜಯರಾಮು, ಮಾಂಡವ್ಯ ಪದವಿ ಪೂರ್ವ ಕಾಲೇಜು ಪ್ರಾಂಶುಪಾಲ ಚಂದ್ರಶೇಖರ್, ಉಪನ್ಯಾಸಕ ಸುಂಡಹಳ್ಳಿ ಮಹೇಶ್, ಕನ್ನಡ ಉಪನ್ಯಾಸಕರು, ಪ್ರೌಢಶಾಲಾ ಶಿಕ್ಷಕರುಗಳು ಹಾಜರಿದ್ದರು.

ಖ್ಯಾತ ವಾಗ್ಮಿ ಪ್ರೊ.ಎಂ.ಕೃಷ್ಣೇಗೌಡ ಸಲಹೆ ನೀಡಿದರು. ಕನ್ನಡ ಸಾಹಿತ್ಯ ಸಮ್ಮೇಳನದ ಮಹತ್ವದ ಅರಿವು-ಸಂವಾದ ಕಾರ್ಯಕ್ರಮವನ್ನು ಖ್ಯಾತ ವಾಗ್ಮಿ ಪ್ರೊ.ಎಂ.ಕೃಷ್ಣೇಗೌಡ ಅವರು ಉದ್ಘಾಟಿಸಿದರು.

> ಸಾಹಿತ್ಯ ಸಮ್ಮೇಳನವು ಸುವರ್ಣ ಕರ್ನಾಟಕದಲ್ಲಿ ಮಂಡ್ಯಕ್ಕೆ ಬಂದಿರುವುದು ಸಂತಸ ತಂದಿದೆ. ಇದು ನಮ್ಮ ಕನ್ನಡಿಗರ ಹಬ್ಬವೂ ಹೌದು, ಸಾಹಿತ್ಯ ಸಮ್ಮೇಳನವು ವಿಶ್ವವೇ ತಿರುಗಿ ನೋಡುವಂತೆ ಮಾಡುವ ಜವಾಬ್ದಾರಿ ಪ್ರತಿಯೊಬ್ಬ ಕನ್ನಡಿಗರ ಮೇಲಿದೆ. ಆ ನಿಟ್ಟಿನಲ್ಲಿ ಎಲ್ಲರೂ ಕೆಲಸ ಮಾಡೋಣ.
>
> ಮೀರಾ ಶಿವಲಿಂಗಯ್ಯ, ಕಸಾಪ ಜಿಲ್ಲಾ ಸಂಚಾಲಕ

ಅಧಿಕ ಸಿವಿಲ್ ಜಡ್ಜ್ ಮತ್ತು ಜೆ.ಎಂ.ಎಫ್.ಸಿ ನ್ಯಾಯಾಲಯ, ಮಧುಗಿರಿ
ಸೀಮಿಸ್ ಸಂಖ್ಯೆ–397/2024

ಅರ್ಜಿದಾರರು: 1. ಎಳೇರಂಗಪ್ಪ ಬಿನ್ ಲೇಟ್ ರಂಗಧಾಮಪ್ಪ@ ರಂಗಧಾಮಯ್ಯ– 53 ವರ್ಷ. 2. ರತ್ನಮ್ಮಕೋಂ.ಎಳೇರಂಗಪ್ಪ–43 ವರ್ಷ, 3. ಗಂಗಾಮಣಿ.ವೈ. ಬಿನ್ ಎಳೇರಂಗಪ್ಪ–25 ವರ್ಷ, ಎಲ್ಲರ ವಾಸ: ಕಾಟಗೊಂಡನಹಳ್ಳಿ ಗ್ರಾಮ, ಮಿಡಿಗೇಶಿ ಹೋಬಳಿ, ಮದುಗಿರಿ ತಾಲೂಕು.

ವಿರುದ್ಧ

ಎದುರುದಾರರು: ಡೆಪ್ಯೂಟಿ ತಹಶೀಲ್ದಾರ್– ನಾಡಕಛೇರಿ, ಮಿಡಿಗೇಶಿ, ಮಿಡಿಗೇಶಿ ಹೋಬಳಿ, ಮಧುಗಿರಿ ತಾಲ್ಲೂಕು.

ಸಾರ್ವಜನಿಕ ಪ್ರಕಟಣೆ.

ಮೇಲ್ಕಂಡ 1ಮತ್ತು 2ನೇ ಅರ್ಜಿದಾರರ ಅಜ್ಜಿಯಾದ ಹಾಗೂ 3ನೇ ಅರ್ಜಿದಾರರ ಮುತ್ತಜ್ಜಿಯಾದ ನರಸಮ್ಮ ಕೋಂ: ನರಸಪ್ಪ ರವರು ದಿನಾಂಕ: 20–03–1999 ರಂದು ಮಧುಗಿರಿ ತಾಲ್ಲೂಕು, ಮಿಡಿಗೇಶಿ ಹೋಬಳಿ ಕಾಟಗೊಂಡು ಗ್ರಾಮದಲ್ಲಿ ಮರಣ ಹೊಂದಿದ್ದು. ಈ ಮೇಲ್ಕಂಡ ಅರ್ಜಿದಾರರು ಸದರಿ ಮೃತರ ಮರಣ ಸಮರ್ಥನಾ ಪತ್ರವನ್ನು ಪಡೆಯಲು ಈ ಮೇಲ್ಕಂಡ ನ್ಯಾಯಾಲಯದಲ್ಲಿ ಅರ್ಜಿ ಸಲ್ಲಿಸಿರುತ್ತಾರೆ. ಸದರಿ ಮೃತರ ಬೇರೆ ಯಾರಾದರೂ ವಾರಸುದಾರರು ಇದ್ದಲ್ಲಿ 30/11/2024 ರಂದು ಬೆಳಗ್ಗೆ 11–00 ಗಂಟೆಗೆ ಖುದ್ದು ತಾವಾಗಲೀ ಅಥವಾ ತಮ್ಮ ವಕೀಲರ ಮುಖಾಂತರವಾಗಲೀ ಹಾಜರಾಗಿ ತಕರಾರು ಸಲ್ಲಿಸಬಹುದು. ಇಲ್ಲವಾದ್ದಲ್ಲಿ ಪ್ರಕರಣವನ್ನು ಏಕಪಕ್ಷೀಯವಾಗಿ ತೀರ್ಮಾನಿಸಲಾಗುವುದು. ನ್ಯಾಯಾಲಯದ ಮೊಹರಿನೊಂದಿಗೆ, 2024 ನೇ ಇಸವಿ ಅಕ್ಟೋಬರ್ ತಿಂಗಳ 28 ನೇದಿನ.

ನ್ಯಾಯಾಲಯದ ಅಪ್ಪಣೆಯ ಮೇರೆಗೆ,
ಶಿರಸ್ತೇದಾರರು
ಅಧಿಕ ಸಿವಿಲ್ ಜಡ್ಜ್ ಮತ್ತು ಜೆ.ಎಂ.ಎಫ್.ಸಿ ರವರ ನ್ಯಾಯಾಲಯ, ಮಧುಗಿರಿ.
ಅರ್ಜಿದಾರರ ಪರ ವಕೀಲರು.
ಎನ್.ನಾಗರಾಜ, ವಕೀಲರು, ಮಧುಗಿರಿ.

ಅಧಿಕ ಸಿವಿಲ್ ಜಡ್ಜ್ ಮತ್ತು ಜೆ.ಎಂ.ಎಫ್.ಸಿ ನ್ಯಾಯಾಲಯ, ಮಧುಗಿರಿ
ಸೀಮಿಸ್ ಸಂಖ್ಯೆ–398/2024

ಅರ್ಜಿದಾರರು: 1. ಎಳೇರಂಗಪ್ಪ ಬಿನ್ ಲೇಟ್ ರಂಗಧಾಮಪ್ಪ@ ರಂಗಧಾಮಯ್ಯ– 53 ವರ್ಷ. 2. ರತ್ನಮ್ಮಕೋಂ.ಎಳೇರಂಗಪ್ಪ–43 ವರ್ಷ, 3. ಗಂಗಾಮಣಿ.ವೈ. ಬಿನ್ ಎಳೇರಂಗಪ್ಪ–25 ವರ್ಷ, ಎಲ್ಲರ ವಾಸ: ಕಾಟಗೊಂಡನಹಳ್ಳಿ ಗ್ರಾಮ, ಮಿಡಿಗೇಶಿ ಹೋಬಳಿ, ಮದುಗಿರಿ ತಾಲೂಕು.

ವಿರುದ್ಧ

ಎದುರುದಾರರು: ಡೆಪ್ಯೂಟಿ ತಹಶೀಲ್ದಾರ್– ನಾಡಕಛೇರಿ, ಮಿಡಿಗೇಶಿ, ಮಿಡಿಗೇಶಿ ಹೋಬಳಿ, ಮಧುಗಿರಿ ತಾಲ್ಲೂಕು.

ಸಾರ್ವಜನಿಕ ಪ್ರಕಟಣೆ.

ಮೇಲ್ಕಂಡ 1ಮತ್ತು 2ನೇ ಅರ್ಜಿದಾರರ ತಾತನಾದ ಹಾಗೂ 3ನೇ ಅರ್ಜಿದಾರರ ಮುತ್ತಾತನಾದ ನರಸಪ್ಪ ಬಿನ್ ಎಳೇರಂಗಪ್ಪರವರು ದಿನಾಂಕ: 29–04–1998 ರಂದು ಮಧುಗಿರಿ ತಾಲ್ಲೂಕು, ಮಿಡಿಗೇಶಿ ಹೋಬಳಿ ಕಾಟಗೊಂಡು ಗ್ರಾಮದಲ್ಲಿ ಮರಣ ಹೊಂದಿದ್ದು. ಈ ಮೇಲ್ಕಂಡ ಅರ್ಜಿದಾರರು ಸದರಿ ಮೃತರ ಮರಣ ಸಮರ್ಥನಾ ಪತ್ರವನ್ನು ಪಡೆಯಲು ಈ ಮೇಲ್ಕಂಡ ನ್ಯಾಯಾಲಯದಲ್ಲಿ ಅರ್ಜಿ ಸಲ್ಲಿಸಿರುತ್ತಾರೆ. ಸದರಿ ಮೃತರ ಬೇರೆ ಯಾರಾದರೂ ವಾರಸುದಾರರು ಇದ್ದಲ್ಲಿ 30/11/2024 ರಂದು ಬೆಳಗ್ಗೆ 11–00 ಗಂಟೆಗೆ ಖುದ್ದು ತಾವಾಗಲೀ ಅಥವಾ ತಮ್ಮ ವಕೀಲರ ಮುಖಾಂತರವಾಗಲೀ ಹಾಜರಾಗಿ ತಕರಾರು ಸಲ್ಲಿಸಬಹುದು. ಇಲ್ಲವಾದ್ದಲ್ಲಿ ಪ್ರಕರಣವನ್ನು ಏಕಪಕ್ಷೀಯವಾಗಿ ತೀರ್ಮಾನಿಸಲಾಗುವುದು. ನ್ಯಾಯಾಲಯದ ಮೊಹರಿನೊಂದಿಗೆ, 2024 ನೇ ಇಸವಿ ಅಕ್ಟೋಬರ್ ತಿಂಗಳ 28 ನೇದಿನ.

ನ್ಯಾಯಾಲಯದ ಅಪ್ಪಣೆಯ ಮೇರೆಗೆ,
ಶಿರಸ್ತೇದಾರರು
ಅಧಿಕ ಸಿವಿಲ್ ಜಡ್ಜ್ ಮತ್ತು ಜೆ.ಎಂ.ಎಫ್. ಸಿ ರವರ ನ್ಯಾಯಾಲಯ, ಮಧುಗಿರಿ.
ಅರ್ಜಿದಾರರ ಪರ ವಕೀಲರು
ಎನ್.ನಾಗರಾಜ, ವಕೀಲರು, ಮಧುಗಿರಿ.

IN THE COURT OF THE CIVIL JUDGE & J.M.F.C. AT SOMWARPET
Cr. M.C. No. 110/2024

Petitioner: G.P.Biddappa.
V/s
Respondents: The Tahsildar and others.

::COURT NOTICE::

The petitioner Sri. G.P. Biddappa, S/o. Late G.T. Ponnappa, R/o. Surlabbi Village, Suntikoppa Hobli, Somwarpet Taluk, Kodagu Dist., has filed a petition under the registration of Birth & eaths Act seeking the Death Certificate of his Grand Father Late. G.D. Thammaiah in the above case. Now the case is posted on 15-11-2024 and anybody who has any objection for the issue of the Death Certificate of the Petitioner's Grand Father Late. G.D. Thammaiah, may appear in person or through a pleader before the above mentioned court on 15-11-2024 at 11.00 A.M. without fail. Failing which the above case will be decided in your absence. Given under my hand and seal this the 22nd day of October 2024 at Somwarpet.

By the order of the Court
Sign/-
Chief Ministerial Office Honble Civil Judge & J.M.F.C. Court
Somwarpet.
Advocate for the Petitioner.
H. E. Pavan Sagar, B.A.L., L.L.B.,
Somwarpet Town,

ರೋಗ ಶಮನವೇ ಆಯುರ್ವೇದದ ಧ್ಯೇಯ

ಸರಗೂರು: ರಾಷ್ಟ್ರೀಯ ಆಯುರ್ವೇದ ದಿನ ಮತ್ತು ಧನ್ವಂತರಿ ಜಯಂತಿ ಕಾರ್ಯಕ್ರಮವನ್ನು ಪಟ್ಟಣದ ವಿವೇಕಾನಂದ ಸ್ಮಾರಕ ಆಸ್ಪತ್ರೆಯ ಆವರಣದಲ್ಲಿ ನಡೆಸಲಾಯಿತು. ಕಾರ್ಯಕ್ರಮ ಕುರಿತು ವಿವೇಕಾನಂದ ಸ್ಮಾರಕ ಆಸ್ಪತ್ರೆಯ ಕೀಲು ಮತ್ತು ಮೂಳೆರೋಗ ತಜ್ಞರು ಆದ ಡಾ ಎಂ. ಆರ್ ಸೀತಾರಾಂರವರು ಮಾತನಾಡಿ ಆಯುರ್ವೇದ ನಮ್ಮ ಪರಂಪರೆ ಇದರ ಮಹತ್ವದ ಅರಿವು ಬೇಕಿದೆ ಆಯುರ್ವೇದ ಪದ ಬಿಡಿಸಿ ಹೇಳುತ್ತ ಆಯು ಎಂದರೆ ಜೀವ ,ವೇದ ಎಂದರೆ ಜ್ಞಾನ ಎಂದರ್ಥ ಅಂದರೆ ಜೀವನವನ್ನು ಹೇಗೆ ನಡೆಸಬೇಕು ಎಂಬ ಜ್ಞಾನ ಅಂದರೆ ಕಾಯಿಲೆ ಬಂದರೆ ಬರುವ ಜ್ಞಾನವಲ್ಲ ಬಂದ ಮೇಲೆ ಹೇಗೆ ಜೀವನ ನಡೆಸಬೇಕು ಎಂಬುದು ಜ್ಞಾನವಾಗಿದೆ. ಇದನ್ನು ಅರಿತು ಪ್ರತಿಯೊಬ್ಬರು ತಮ್ಮ ದಿನದ ಜೀವನ ಶೈಲಿಯನ್ನು ರೂಪಿಸಿಕೋಲ್ಲಿ ಎಂದು ಸಲಹೆ ನೀಡಿದರು.

ಆಯುರ್ವೇದ ಪ್ರಸೂತಿ ಮತ್ತು ಸ್ತ್ರೀರೋಗ ತಜ್ಞರಾದ ಡಾ.ರನೀಷ ರವರು ಮಾತನಾಡಿ ಪುರಾತನ ಆಯುರ್ವೇದದ ಮೂಲ ಮಂತ್ರವೇನೆಂದರೆ ಆರೋಗ್ಯವಂತರ ಆರೋಗ್ಯ ಕಾಪಾಡುವುದು, ರೋಗ ಪೀಡಿತರ ರೋಗ ಶಮನಗೋಳಿಸುವುದು ನಮ್ಮ ಆಯುರ್ವೇದದ ಧ್ಯೇಯವಾಗಿದೆ.ಆದ್ದರಿಂದ ಪ್ರತಿಯೊಬ್ಬರೂ ದೈಹಿಕ ಮತ್ತು ಮಾನಸಿಕ ಆರೋಗ್ಯದ ಕಡೆ ಗಮನಹರಿಸಬೇಕು.ಆಧ್ಯಾತ್ಮಿಕ ಚಿಂತನೆ ನಮ್ಮದಾಗಬೇಕು ಎಂದು ತಿಳಿಸಿದರು.

ಕಾರ್ಯಕ್ರಮದಲ್ಲಿ ಆಸ್ಪತ್ರೆಯ ಉಪ ನಿರ್ದೇಶಕರು ಹಾಗೂ ಪ್ರಸೂತಿ ಮತ್ತು ಸ್ತ್ರೀರೋಗ ತಜ್ಞರು ಆದ ಡಾ.ಶಂಕರ್ ಎಚ್.ಕೆ ಹಾಗೂ ನೇರಳೆ ಗ್ರಾಮದ ಶಿವಮ್ಮ ಮಾತನಾಡಿದರು,

ಆಸ್ಪತ್ರೆ ನಿರ್ದೇಶಕರಾದ ಡಾ ರವೀಂದ್ರನಾಥ್ ಶ್ರಾಫ್, ಡಾ.ವೀಣಾ, ಡಾ.ವಿಭಾ ಹಿರಿಯ ಆಯುರ್ವೇದ ತಜ್ಞರಾದ ಡಾ.ಪ್ರಶಾತ್ ಎಸ್. ಬಿಂಜಾಲ್‌ಬಾವಿ, ಡಾ.ರಿಂದಾ ದೇವಿ, ಕಣ್ಣಿನ ತಜ್ಞರಾದ ಡಾ ನರೇಂದ್ರರಾಮಕೃಷ್ಣ, ಶಸ್ತ್ರ ಚಿಕಿತ್ಸಾ ತಜ್ಞರಾದ ಡಾ ಶರತ್‌ಚಂದ್ರ, ಡಾ. ಅರುಣ್ ಕುಮರ್, ಡಾ.ಅಭಿಷೇಕ್, ಮತ್ತು ಆಯುರ್ವೇದ ಪಂಚಕರ್ಮ ಥೆರಪಿ ಸಿಬ್ಬಂದಿಗಳಾದ ರವಿ, ಮೀನಾಕ್ಷಿ, ವಿದ್ಯಾ, ಪ್ರೀತಿ, ಶ್ರೀನಿವಾಸ್, ಇತರೆ ಆಸ್ಪತ್ರೆ ಸಿಬ್ಬಂದಿ ವರ್ಗದವರು ಮತ್ತು ಸಾರ್ವಜನಿಕರು ಭಾಗಿಯಾಗಿದ್ದರು.

ಧನ್ವಂತರಿ ಜಯಂತಿ ಕಾರ್ಯಕ್ರಮವನ್ನು ವಿವೇಕಾನಂದ ಆಸ್ಪತ್ರೆಯ ಆವರಣದಲ್ಲಿ ನಡೆಸಲಾಯಿತು.

> ಸರಗೂರು ತಾಲೂಕಿನಲ್ಲೇ ವಿವೇಕಾನಂದ ಆಸ್ಪತ್ರೆಯಲ್ಲಿ ಉತ್ತಮ ಆಯುರ್ವೇದ ಚಿಕಿತ್ಸೆಯನ್ನು ನೀಡುತ್ತಿದ್ದರು, ನಾವು ಆಧುನಿಕ ಜಗತ್ತಿಗೆ ಮಾರು ಹೋಗಿರುತ್ತೇವೆ. ಶಾಂತಿ, ಸಹನೆ, ಇರಬೇಕು. ಪ್ರತಿನಿತ್ಯ ವ್ಯಾಯಾಮ ,ವಾಯುವಿಹಾರಕ್ಕೆ ಹೋಗುವ ಅಭ್ಯಾಸ ಇದ್ದರೆ ಕಡಿಮೆ ಊಟ ಮಾಡಿ ಹೆಚ್ಚು ಆರೋಗ್ಯವಂತರಾಗಿರಬಹುದು, ಸ್ಥಳಿವಾಗಿ ಸಿಗುವ ಆರೋಗ್ಯಸೇವೆಯನ್ನು ಪ್ರತಿಯೋಬ್ಬರು ಸದುಪಯೋಗಿಸಿಕೊಳ್ಳಿ.
>
> ಜನ್ನಿಪುರ ಮಲ್ಲೇಶ್, ಮಹಾಸಭಾ ಪ್ರಧಾನ ಕಾರ್ಯದರ್ಶಿ

ಸಮರ್ಥ ಸಂಸ್ಥೆ ಸಾಧಕರಿಗೆ ಸನ್ಮಾನ

ಮಡಿಕೇರಿ: ಸಮರ್ಥ ಕನ್ನಡಿಗರು ಸಂಸ್ಥೆಯ ಕೊಡಗು ಜಿಲ್ಲಾ ಘಟಕದಿಂದ ನವಂಬರ್ 3ರಂದು ಮಡಿಕೇರಿಯ ಓಂಕಾರ ಸದನದಲ್ಲಿ ನಿಮ್ಮ ಪ್ರತಿಭೆ-ನಮ್ಮ ವೇದಿಕೆ ಕಾರ್ಯಕ್ರಮ ಆಯೋಜಿಸಲಾಗಿದ್ದು ಈ ಸಂದರ್ಭ ಜಿಲ್ಲೆಯ ವಿವಿಧ ಕ್ಷೇತ್ರಗಳ ಸಾಧಕರಿಗೆ ಸನ್ಮಾನದ ಗೌರವಾರ್ಪಣೆ ನೆರವೇರಲಿದೆ ಎಂದು ಸಮರ್ಥ ಕನ್ನಡಿಗರು ಸಂಸ್ಥೆಯ ಜಿಲ್ಲಾ ಸಂಚಾಲಕಿ ಕೆ. ಜಯಲಕ್ಷ್ಮಿ ಮಾಹಿತಿ ನೀಡಿದ್ದಾರೆ, ಈ ವರ್ಷ ಸಮರ್ಥ ಕನ್ನಡಿಗರು ಸಂಸ್ಥೆಯಿಂದ ಸನ್ಮಾನಕ್ಕೆ ಭಾಜನರಾದವರು- ಟಿ.ಪಿ ರಮೇಶ್ (ಸಾಹಿತ್ಯ ಸಂಘಟನೆ) , ಕುಂಡ್ಯೋಳಂಡ ದಿನೇಶ್ ಕಾರ್ಯಪ್ಪ (ಕ್ರೀಡಾ ಸಂಘಟನೆ) ಆರ್ .ಕೆ ಬಾಲಚಂದ್ರ (ಕನ್ನಡದಲ್ಲಿ ಬ್ಯಾಂಕಿಂಗ್ ಮಾರ್ಗದರ್ಶನ) ಅರುಣ್ ಶೆಟ್ಟಿ (ಸಮಾಜಸೇವೆ) , ತೇಲಪಂಡ ಆರತಿ ಸೋಮಯ್ಯ (ಶಿಕ್ಷಣ), ನಿಖಿಲ್ ರಾಮಮೂರ್ತಿ(ಬಿದಿರು ಕೃಷಿ), ಚಿತ್ರಾ ಆರ್ಯನ್ (ಸಂಗೀತ), ಸಂಗೀತ ರವಿರಾಜ್ (ಸಾಹಿತ್ಯ), ಎಸ್ ಕೆ ಲಕ್ಷ್ಮೀಶ್ (ಮಾಧ್ಯಮ), ಓಬಳಿ (ಪೌರಸೇವೆ) ಬೆಂಗಳೂರಿನ ಲಕ್ಷ್ಮಿ ಲಿಂಗೇಶ್ (ಸಮಾಜಮುಖಿ ಕಾರ್ಯ), ನ 3 ರಂದು ಭಾನುವಾರ ಬೆಳಗ್ಗೆ 10 ಗಂಟೆಗೆ ಆಯೋಜಿತ ಸಭಾಕಾರ್ಯಕ್ರಮವನ್ನು ಜಿಲ್ಲಾ ಕನ್ನಡ ಸಾಹಿತ್ಯ ಪರಿಷತ್ ಮತ್ತು ಜಿಲ್ಲಾ ಜಾನಪದ ಪರಿಷತ್‌ನ ಸಂಪತ್ ಕುಮಾರ್ ಉದ್ಘಾಟಿಸಲಿದ್ದಾರೆ,

ಸಮಾಚಾರ ಸಣ್ಣದಲ್ಲ

ಪೊಲೀಸ್ ಅಧಿಕಾರಿಗೆ ಚಾಕು ಇರಿತ

ಕೋಲಾರ: ರಾತ್ರಿ ಗಸ್ತಿನಲ್ಲಿದ್ದ ಮಹಿಳಾ ಪೊಲೀಸ್ ಅಧಿಕಾರಿಗೆ ದುಷ್ಕರ್ಮಿ ಚಾಕುವಿನಿಂದ ಇರಿದಿದ್ದು ನಾಗರಿಕರು ತಲ್ಲಣಗೊಂಡಿದ್ದಾರೆ. ಬಂಗಾರಪೇಟೆ

ಪಟ್ಟಣದಲ್ಲಿ ಸೋಮವಾರ ತಡರಾತ್ರಿ ಕೃತ್ಯ ನಡೆದಿದ್ದು ಚಿನ್ನದನಾಡಿನಲ್ಲಿ ಕಾನೂನು ಸುವ್ಯವಸ್ಥೆ ತಪ್ಪಿದೆಯಾ ಎಂಬ ಶಂಕೆ ಮನೆ ಮಾಡಿದೆ. ರಾತ್ರಿ ಪಾಳಯದಲ್ಲಿದ್ದ ಮಹಿಳಾ ಎಎಸ್ಐ ಭಾನು ಗಾಯಾಳುವಾಗಿದ್ದು ಆರೋಪಿ ಜಾರ್ಖಂಡ್ ಮೂಲದ ಅಜಯ್ ಸಿಂಗ್(21) ಬಂಧಿತ. ಜೀಪ್‌ನಲ್ಲಿ ರಾತ್ರಿ ಪಾಳಯದ ಗಸ್ತಿನಲ್ಲಿದ ವೇಳೆ ಮಧ್ಯರಾತ್ರಿ ಸಾರಿಗೆ ಬಸ್ ನಿಲ್ದಾಣದ ಬಳಿ ಎದುರಾದ ಆರೋಪಿಯನ್ನು ಯಾರು ನೀನು? ಎಲ್ಲಿಗೆ ಹೋಗುತ್ತಿದ್ದೀಯಾ? ಎಂದು ಪ್ರಶ್ನಿಸುತ್ತಿದ್ದಂತೆಯೇ ಏಕಾಏಕಿ ಚಾಕುವಿನಿಂದ ಇರಿದು ಪರಾರಿ ಆಗಲು ಯತ್ನಿಸಿದಾಗ ಜೀಪ್ ಚಾಲಕನ ಜತೆಗೂಡಿ ಆರೋಪಿಯನ್ನು ಲಾಕ್ ಮಾಡಲಾಗಿದೆ. ಆರೋಪಿ ಗಾಂಜಾ ಸೇವಿಸಿದ್ದು ಮತ್ತಿನಲ್ಲಿ ಕೃತ್ಯ ಎಸಗಿದ್ದಾನೆಂದು ಮೇಲ್ನೋಟಕ್ಕೆ ಕಂಡುಬಂದಿದ್ದು ತನಿಖೆ ಮುಂದುವರಿದಿದೆ ಎಂದು ಹಿರಿಯ ಪೊಲೀಸ್ ಅಧಿಕಾರಿಗಳು ವಿಶ್ವವಾಣಿಗೆ ಮಾಹಿತಿ ನೀಡಿದ್ದಾರೆ.

ವಾಲ್ಮೀಕಿ ಜಯಂತಿಯಲ್ಲಿ ಸಚಿವ ರಾಜಣ್ಣ ಭಾಗಿ

ಹಾಸನ: ತಾಲೂಕಿನ ಶಾಂತಿಗ್ರಾಮ ಹೋಬಳಿ ಜಾಗರವಳ್ಳಿಯಲ್ಲಿ ಶ್ರೀಮಹರ್ಷಿ ವಾಲ್ಮೀಕಿ ಯುವಕರ ಸಂಘದಿಂದ ಹಮ್ಮಿಕೊಂಡಿದ್ದ ಶ್ರೀಮಹರ್ಷಿ ವಾಲ್ಮೀಕಿ

ಜಯಂತ್ಯುತ್ಸವ ಸಮಾರಂಭವನ್ನು ಜಿಲ್ಲಾ ಉಸ್ತುವಾರಿ ಸಚಿವರಾದ ಕೆ.ಎನ್. ರಾಜಣ್ಣ ಉದ್ಘಾಟಿಸಿ ನಂತರ ಸಭೆಯನ್ನುದ್ದೇಶಿಸಿ ಮಾತನಾಡಿದರು. ಈ ವೇಳೆ ಲೋಕಸಭಾ ಸದಸ್ಯ ಶ್ರೇಯಸ್ ಎಂ.ಪಟೇಲ್, ಹಾಸನ ನಗರಾಭಿವೃದ್ಧಿ ಪ್ರಾಧಿಕಾರ ಮಾಜಿ ಅಧ್ಯಕ್ಷ ಕೃಷ್ಣಕುಮಾರ್, ತುಮಕೂರು ಜಿಲ್ಲಾ ವಾಲ್ಮೀಕಿ ಸಮಾಜದ ಅಧ್ಯಕ್ಷ ಪುರುಷೋತ್ತಮ್, ಸಾಹಿತಿ ಹಾಗೂ ನಿವೃತ್ತ ಪ್ರಾಂಶುಪಾಲ ಟಿ.ಎಚ್.ಅಪ್ಪಾಜಿಗೌಡ, ದಯಾನಂದ್, ಪೂರ್ಣಿಮ ಪ್ರದೀಪ್, ವಾಲ್ಮೀಕಿ ಸಮಾಜದ ಮುಖಂಡರಾದ ಧರ್ಮಪ್ಪ ನಾಯಕ, ಶಿವಪ್ಪ ನಾಯಕ, ಮಧು ನಾಯಕ ಸೇರಿದಂತೆ ಹಲವು ಮುಖಂಡರು ಹಾಗೂ ಗ್ರಾಮಸ್ಥರು ಹಾಜರಿದ್ದರು. ಇದಕ್ಕೂ ಮುನ್ನ ಪೂರ್ಣಕುಂಭ ಸ್ವಾಗತದ ಮೂಲಕ ಸಚಿವರನ್ನು ಬರಮಾಡಿಕೊಳ್ಳಲಾಯಿತು. ಇದೇ ವೇಳೆ ಸಮುದಾಯಕ್ಕೆ ಕೊಡುಗೆ ನೀಡಿದ ಹಾಗೂ ವಿವಿಧ ಕ್ಷೇತ್ರಗಳಲ್ಲಿ ಸಾಧನೆ ಮಾಡಿದ ಗಣ್ಯರನ್ನು ಸಚಿವರು ಸನ್ಮಾನಿಸಿ ಅಭಿನಂದಿಸಿದರು.

ಜಿಲ್ಲಾ ಮಟ್ಟದ ಕ್ರೀಡಾಕೂಟ ಇಂದು

ತುಮಕೂರು: ಜಿಲ್ಲೆಯ ಪ್ರೌಢಶಾಲಾ ಬಾಲಕ, ಬಾಲಕಿಯರ ಜಿಲ್ಲಾ ಹಂತದ ಮೇಲಾಟಗಳ ಸ್ಪರ್ಧೆಯನ್ನು ಅಕ್ಟೋಬರ್ 30ರಂದು ನಗರದ ಮಹಾತ್ಮ ಗಾಂಧಿ ಕ್ರೀಡಾಂಗಣದಲ್ಲಿ ಆಯೋಜಿಸಲಾಗಿದೆ. ತಾಲ್ಲೂಕು ಹಂತದಲ್ಲಿ ನಡೆದ ಮೇಲಾಟಗಳ ಸ್ಪರ್ಧೆಗಳಲ್ಲಿ ಮೊದಲ ಮತ್ತು ಎರಡನೇ ಸ್ಥಾನ ಪಡೆದ ವಿಜೇತ ಕ್ರೀಡಾಪಟುಗಳು ಜಿಲ್ಲಾ ಹಂತದಲ್ಲಿ ಭಾಗವಹಿಸಲಿದ್ದಾರೆ. ಜಿಲ್ಲಾ ಮಟ್ಟದಲ್ಲಿ ಮೊದಲೆರಡು ಸ್ಥಾನ ಪಡೆದ ವಿಜೇತರು ರಾಜ್ಯ ಮಟ್ಟಕ್ಕೆ ಆಯ್ಕೆಯಾಗುವರು ಎಂದು ಶಾಲಾ ಶಿಕ್ಷಣ ಇಲಾಖೆ ಉಪನಿರ್ದೇಶಕ ಮನಮೋಹನ್ ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

ನಟ ಪುನೀತ್ 3ನೇ ವರ್ಷದ ಪುಣ್ಯ ಸ್ಮರಣೆ

ಬೆಂಗಳೂರು ಉತ್ತರ: ಕರ್ನಾಟಕ ರತ್ನ ಪವರ್ ಸ್ಟಾರ್ ಡಾ.ಪುನೀತ್ ರಾಜಕುಮಾರ್ ಅವರ ಮೂರನೇ ವರ್ಷದ ಪುಣ್ಯ ಸ್ಮರಣೀಯ ಅಂಗವಾಗಿ ಯಶವಂತಪುರ ವಿಧಾನಸಭಾ ಕ್ಷೇತ್ರದ ಬೆಂಗಳೂರು ದಕ್ಷಿಣ ತಾ.ಚುಂಚನಕುಪ್ಪೆ ಗ್ರಾಮ ಪಂಚಾಯಿತಿ ಆವರಣದ ಮುಂದೆ 30 ಅಡಿ ಎತ್ತರದ ಅಪ್ಪು ಅವರ ಕಟೌಟ್ ನಿರ್ಮಿಸಿ ಮತ್ತೆ ಹುಟ್ಟಿ ಬಾ ಅಪ್ಪು ಎಂಬ ಘೋಷಣೆ ಮೂಲಕ ಪೂಜಾ ವಿಧಾನ ಸಲ್ಲಿಸಿದರು. ಗ್ರಾಮ ಪಂಚಾಯತಿ ಅಧ್ಯಕ್ಷ ಸಿಆರ್ ಸುಕುಮಾರ್ ಅವರ ನೇತೃತ್ವದಲ್ಲಿ ಮತ್ತು ಅಭಿಮಾನಿಗಳಿಂದ ಸಿಹಿ ವಿತರಣೆ ಮತ್ತುಅನ್ನ ಸಂತರ್ಪಣೆ ಮಾಡಲಾಯಿತು.

ನಂಬಿಕೆ ಜಗದಂಬಿಕೆ
ಗುರು
ಪ್ರತಿ ಗುರುವಾರ

ಸಂಪರ್ಕ ಕಾಲುವೆ ನಿರ್ಮಾಣಕ್ಕೆ ವಿರೋಧಿಸಿ ಪಾದಯಾತ್ರೆಗೆ ತೀರ್ಮಾನ

ಹೇಮಾವತಿ ವಿರೋಧಿ ಸಮಿತಿಯಿಂದ ಪೂರ್ವಭಾವಿ ಸಭೆ। ಮಾಜಿ ಸಚಿವ ಸೊಗಡು ಶಿವಣ್ಣ ನೇತೃತ್ವ

ಗುಬ್ಬಿ: ಜಿಲ್ಲೆಗೆ ಮರಣ ಶಾಸನ ಬರೆಯುವ ಹೇಮಾವತಿ ಲಿಂಕ್ ಕೆನಾಲ್ ಪೈಪ್ ಲೈನ್ ಕಾಮಗಾರಿ ಈಗಾಗಲೇ ಹೋರಾಟದ ಮೂಲಕ ಸ್ಥಗಿತಗೊಳಿಸಲಾಗಿದೆ. ಆದರೆ ಸರಕಾರ ರೈತ ವಿರೋಧಿ ನೀತಿ ಅನುಸರಿಸಿ ಕೆಲಸ ಪುನರ್ ಆರಂಭ ಮಾಡಲು ಮುಂದಾಗಿರುವುದು ರೈತರನ್ನು ಕೆರಳಿಸಿದೆ. ಈ ಹಿನ್ನಲೆ ಬೃಹತ್ ಮಟ್ಟದ ರೈತ ಹೋರಾಟಕ್ಕೆ ಲಿಂಕ್ ಕೆನಾಲ್ ವಿರೋಧಿ ಸಮಿತಿ ನಿರ್ಧರಿಸಿ ನಾಲೆಯ 70 ನೇ ಕಿಮೀನಿಂದ ತುಮಕೂರು ಕಡೆಗೆ ಪಾದಯಾತ್ರೆಯನ್ನು ಸಾವಿರಾರು ಟ್ರಾ ್ಯಕ್ಟರ್ ಹಾಗೂ ಜೆಸಿಬಿ ಯಂತ್ರಗಳನ್ನು ತರುವ ಮೂಲಕ ನಡೆಸಲು ನಿರ್ಧಾರ ಕೈಗೊಳ್ಳಲಾಯಿತು.

ಪಟ್ಟಣದ ಪ್ರವಾಸಿ ಮಂದಿರದಲ್ಲಿ ಹೇಮಾವತಿ ಲಿಂಕ್ ಕೆನಾಲ್ ವಿರೋಧಿ ಸಮಿತಿ ಆಯೋಜಿಸಿದ್ದ ಪೂರ್ವಭಾವಿ ಸಭೆಯಲ್ಲಿ ಎಲ್ಲಾ ಮುಖಂಡರು, ಸಂಘ ಸಂಸ್ಥೆಗಳ ಪದಾಧಿಕಾರಿಗಳು, ಜನ ಪ್ರತಿನಿಧಿಗಳು ಹಾಗೂ ರೈತಸಂಘದ ಸದಸ್ಯರು ಹಾಜರಿದ್ದು ಹೋರಾಟದ ಸ್ವರೂಪ ಮತ್ತು ಸರಕಾರದ ಗಮನ ಸೆಳೆಯುವ ಮಟ್ಟಕ್ಕೆ ನಡೆಸಲು ನಿರ್ಧರಿಸಲಾಯಿತು.

ಸಮಿತಿಯ ನೇತೃತ್ವ ವಹಿಸಿರುವ ಮಾಜಿ ಸಚಿವ ಸೊಗಡು ಶಿವಣ್ಣ ಮಾತನಾಡಿ ಸಮಾಜದ ಪರ ನಿಲ್ಲುವವರು ನಾವುಗಳು. ತಪ್ಪು ಮಾಡಿರುವುದು ಸರಕಾರ. ರೈತರ ಒಪ್ಪಿಗೆ ಇಲ್ಲದೆ ಅವೈಜ್ಞಾನಿಕ ಕೆಲಸಕ್ಕೆ ಮುಂದಾಗಿದ್ದಾರೆ. ಬೃಹತ್ ಹೋರಾಟದ ಬಗ್ಗೆ ಜಿಲ್ಲಾಧಿಕಾರಿಗಳು ಹಾಗೂ ಪೊಲೀಸ್ ವರಿಷ್ಠಾಧಿಕಾರಿಗಳೊಟ್ಟಿಗೆ ಮಾತನಾಡಿ ಕಾನೂನು ಕೈಗೆತ್ತಿಕೊಳ್ಳುವ ಅನಿವಾರ್ಯ ಎದುರಾಗಿದೆ ಎಂದು ಎಚ್ಚರಿಕೆ ನೀಡುತ್ತೇನೆ. ಕೇಂದ್ರ ಸಚಿವ ಸೋಮಣ್ಣ ಅವರು ಸಹ ನಮ್ಮ ಹೋರಾಟಕ್ಕೆ ಸಾಥ್ ನೀಡುತ್ತಾರೆ. ಶಾಸಕ ಸುರೇಶ್ ಗೌಡ ಕೂಡಾ ನಮ್ಮೊಟ್ಟಿಗೆ ನಿಲ್ಲಲಿದ್ದಾರೆ ಎಂದರು.

ಬಿಜೆಪಿ ಮುಖಂಡ ಎಸ್.ಡಿ.ದಿಲೀಪ್ ಕುಮಾರ್ ಮಾತನಾಡಿ ರಾತ್ರೋರಾತ್ರಿ ಪೈಪ್ ತಂದು ಇಳಿಸಿ ಕೆಲಸ ಆರಂಭಿಸಿದ್ದರು. ಕೂಡಲೇ ರೈತರೊಂದಿಗೆ ಸ್ಥಳಕ್ಕೆ ತೆರಳಿ ಕೆಲಸ ನಿಲ್ಲಿಸಿದ್ದೇವೆ. ಈ ಬಗ್ಗೆ ಗುಬ್ಬಿ ಶಾಸಕರು ಡಿವೈಎಸ್ಪಿ ಜೊತೆ ಮಾತನಾಡಿದ್ದೇನೆ ಎಂದಿದ್ದರು. ಆದರೆ ರೈತರ ಪರ ನಿಲ್ಲಲು ಹೇಳದೇ ಗುತ್ತಿಗೆದಾರರ ಪರ ನಿಲ್ಲಲು ಹೇಳಿದ್ದಾರೆ ಎಂದು ತಡವಾಗಿ ಅರಿವಾಗಿದೆ ಎಂದು ವ್ಯಂಗ್ಯವಾಡಿ ಜೈಲ್ ಭರೋ ನಡೆಸಲು ನಮ್ಮ ರೈತರು ಸಿದ್ಧರಿದ್ದಾರೆ. ತಾಲ್ಲೂಕಿನ 50 ಸಾವಿರ ಮನೆಯಿಂದ ಒಬ್ಬರಂತೆ ಆರು ತಾಲೂಕಿನ ರೈತರನ್ನು ಜೈಲಿಗೆ ಹಾಕಬೇಕಿದೆ ಎಂದು ಎಚ್ಚರಿಕೆ ನೀಡಿದರು.

ಪಟ್ಟಣದ ಪ್ರವಾಸಿ ಮಂದಿರದಲ್ಲಿ ಹೇಮಾವತಿ ಲಿಂಕ್ ಕೆನಾಲ್ ವಿರೋಧಿ ಸಮಿತಿ ಆಯೋಜಿಸಿದ್ದ ಪೂರ್ವಭಾವಿ ಸಭೆಯಲ್ಲಿ ಮಾಜಿ ಸಚಿವ ಸೊಗಡು ಶಿವಣ್ಣ ಅವರು ಮಾತನಾಡಿದರು.

> ಪಟ್ಟಣದ ಪ್ರವಾಸಿ ಮಂದಿರದಲ್ಲಿ ಹೇಮಾವತಿ ಲಿಂಕ್ ಕೆನಾಲ್ ವಿರೋಧಿ ಸಮಿತಿ ಆಯೋಜಿಸಿದ್ದ ಪೂರ್ವಭಾವಿ ಸಭೆಯಲ್ಲಿ ಎಲ್ಲಾ ಮುಖಂಡರು, ಸಂಘ ಸಂಸ್ಥೆಗಳ ಪದಾಧಿಕಾರಿಗಳು, ಜನ ಪ್ರತಿನಿಧಿಗಳು ಹಾಗೂ ರೈತಸಂಘದ ಸದಸ್ಯರು ಹಾಜರಿದ್ದು ಹೋರಾಟದ ಸ್ವರೂಪ ಮತ್ತು ಸರಕಾರದ ಗಮನ ಸೆಳೆಯುವ ಮಟ್ಟಕ್ಕೆ ನಡೆಸಲು ನಿರ್ಧರಿಸಲಾಯಿತು.
>
> **ಸೊಗಡು ಶಿವಣ್ಣ** ಮಾಜಿ ಸಚಿವ

> ನೀರಿಗಾಗಿ ಕೇಸ್ ಹಾಕಲಿ ಬಿಡಿ. ಯಾರು ಎದೆಗುಂದದೆ ಹೋರಾಟ ನಡೆಸೋಣ. ಬರುವಾಗ ಜೊತೆಯಲ್ಲಿ ಯಡೆಮಟ್ಟೆ ತೆಗೆದುಕೊಂಡು ಬನ್ನಿ. ಪೊಲೀಸರನ್ನೇ ಅಟ್ಟಾಡಿಸೋಣ. ನಮ್ಮ ನೀರಿಗಾಗಿ ಪೊಲೀಸರು ಹೋರಾಟಕ್ಕೆ ಸಹಕಾರ ನೀಡಬೇಕಿದೆ. ಅವರಿಗೂ ನೀರು ಬೇಡವೇ, ಅವರು ರೈತರ ಮಕ್ಕಳು ಅಲ್ಲವೇ ಎಂದು ಪ್ರಶ್ನಿಸಿ ತಾಂತ್ರಿಕ ಸಮಿತಿ ಸಭೆಯಲ್ಲಿ ಸಚಿವ ಡಿಕೆಶಿ ಅವರಿಗೆ ನೇರವಾಗಿ ಖಂಡಿಸಿ ಈ ಕೆಲಸ ಪೂರ್ಣ ಮಾಡಲು ಬಿಡುವುದಿಲ್ಲ ಎಂದು ಎಚ್ಚರಿಕೆ ನೀಡಿದ್ದೇನೆ. ಸಾವಿರಾರು ರೈತರು ಒಟ್ಟಿಗೆ ನುಗ್ಗೋಣ ಕೆಲಸ ನಿಲ್ಲಿಸೋಣ.
>
> **ಎಂ.ಟಿ.ಕೃಷ್ಣಪ್ಪ** ಶಾಸಕ

ಜೆಡಿಎಸ್ ಮುಖಂಡ ಬಿ.ಎಸ್.ನಾಗರಾಜು ಮಾತನಾಡಿ ಜಿಲ್ಲೆಯಲ್ಲಿ ಪ್ರಭಾವಿ ಸಚಿವರು, ಶಾಸಕರು ಇದ್ದು ರೈತರು ಹೋರಾಟಕ್ಕೆ ಬಂದಿದ್ದು ವಿಪರ್ಯಾಸ. ಪ್ರಭಾವಿಗಳು ರಾಜೀನಾಮೆ ಕೊಡುವ ಹೇಳಿಕೆ ನೀಡಿದ್ದರೆ ಈ ಕೆಲಸ ನಡೆಯುತ್ತಿರಲಿಲ್ಲ. ನಮ್ಮ ಗುಬ್ಬಿ ಶಾಸಕರಿಗೆ ನೀರಾವರಿ ಬಗ್ಗೆ ಇಚ್ಛಾಶಕ್ತಿ ಇಲ್ಲ. 25 ವರ್ಷದಿಂದ ಯಾವುದೇ ನೀರಾವರಿ ಕೆಲಸ ತಂದಿಲ್ಲ ಎಂದರು.

ಎಪಿಎಂಸಿ ಮಾಜಿ ಅಧ್ಯಕ್ಷ ಕಳ್ಳಿಪಾಳ್ಯ ಲೋಕೇಶ್ ಮಾತನಾಡಿ ಜಿಲ್ಲೆಯ ರೈತರ ಹಿತಾಸಕ್ತಿ ಕಾಪಾಡುವ ಹೊಣೆ ಹೊತ್ತ ಜನಪ್ರತಿನಿಧಿಗಳು, ಕಾಂಗ್ರೆಸ್ ಪಕ್ಷದ ಮುಖಂಡರು ಸರ್ಕಾರಕ್ಕೆ ಮನದಟ್ಟು ಮಾಡಿ ಈ ಯೋಜನೆ ಕೈ ಬಿಡಲು ಹೇಳುವ ಧೈರ್ಯವೇ ಕಾಣುತ್ತಿಲ್ಲ. ಹೀಗೆ ಮುಂದುವರೆದರೆ ರೈತರೇ ನಿಮಗೆ ತಕ್ಕ ಪಾಠ ಕಲಿಸಲಿದ್ದಾರೆ ಎಂದರು.

ಸಭೆಯಲ್ಲಿ ರೈತ ಸಂಘದ ಜಿಲ್ಲಾಧ್ಯಕ್ಷ ಗೋವಿಂದರಾಜು, ತಾಲೂಕು ಅಧ್ಯಕ್ಷ ವೆಂಕಟೇಗೌಡ, ಬಿಜೆಪಿ ಜಿಲ್ಲಾ ಉಪಾಧ್ಯಕ್ಷ ಭೈರಪ್ಪ, ತಾಲ್ಲೂಕು ಅಧ್ಯಕ್ಷ ಪಂಚಾಕ್ಷರಿ, ನಂಜೇಗೌಡ, ಕನ್ನಡಸೇನೆ ಜಿಲ್ಲಾಧ್ಯಕ್ಷ ಧನಿಯಕುಮಾರ್, ಕನ್ನಡ ಪ್ರಕಾಶ್, ಕರ್ನಾಟಕ ರೈತ ಸಂಘದ ಬಸವರಾಜು, ಶಬ್ಬೀರ್ ಅಹ್ಮದ್, ರಾಮಚಂದ್ರರಾವ್, ಕನ್ನಡ ಪ್ರಕಾಶ್, ರಾಮಣ್ಣ, ವಿನಯಕುಮಾರ್, ಸಿ.ಆರ್. ಶಂಕರ್ ಕುಮಾರ್, ಲೋಕೇಶ್, ಪಪಂ ಸದಸ್ಯರಾದ ಜಿ.ಆರ್. ಶಿವಕುಮಾರ್, ಅಣ್ಣಪ್ಪಸ್ವಾಮಿ, ಬಲರಾಮಯ್ಯ, ತಿರುಮಲೇಶ್ ಇತರರು ಇದ್ದರು.

ಮಹಿಳಾ ಸಿಬ್ಬಂದಿಗೆ ನೆರವು ದೂರು ಸಮಿತಿ ಸ್ಥಾಪನೆ

ಅಧ್ಯಕ್ಷೆ ನಾಗಲಕ್ಷ್ಮಿ ಚೌದರಿ ಪಾಷ್ ಬಗ್ಗೆ ನಡೆಸಿದ ಸಭೆಯಲ್ಲಿ ಜಿಲ್ಲಾ ಮಟ್ಟದ ಎಲ್ಲಾ ಅಧಿಕಾರಿಗಳು ಭಾಗಿಯಾಗಿದ್ದರು.

ಚಿಕ್ಕಬಳ್ಳಾಪುರ: ಸರಕಾರಿ ಅಥವಾ ಖಾಸಗಿ ಉದ್ಯೋಗ ಸ್ಥಳಗಳಲ್ಲಿ ಮಹಿಳಾ ಸಿಬ್ಬಂದಿ ಮೇಲಿನ ದೌರ್ಜನ್ಯ ತಡೆಗೆ ಕೇಂದ್ರ ಸರಕಾರ ಜಾರಿ ಮಾಡಿರುವ ಪಾಶ್ 2013 ಕಾಯ್ದೆಯನ್ವಯ ಆಂತರಿಕ ದೂರು ಸಮಿತಿಗಳನ್ನು ಎಲ್ಲಾ ಕಚೇರಿಗಳಲ್ಲಿ ಕಡ್ಡಾಯವಾಗಿ ರಚಿಸುವ ಮೂಲಕ ನೊಂದ ಹೆಣ್ಣುಮಕ್ಕಳು,ಮಹಿಳೆಯರಿಗೆ ಸ್ಪಂದಿಸಬೇಕು ಎಂದು ರಾಜ್ಯ ಮಹಿಳಾ ಆಯೋಗದ ಅಧ್ಯಕ್ಷೆ ಡಾ.ನಾಗಲಕ್ಷ್ಮಿ ಚೌದರಿ ಅವರು ಸೂಚಿಸಿದರು.

ಚಿಕ್ಕಬಳ್ಳಾಪುರ ಜಿಲ್ಲಾಡಳಿತ ಭವನದಲ್ಲಿ ಇಂದು ರಾಷ್ಟ್ರೀಯ ಮಹಿಳಾ ಆಯೋಗ ಮತ್ತು ಕರ್ನಾಟಕ ಮಹಿಳಾ ಆಯೋಗದ ಸಹಯೋಗದಲ್ಲಿ ಸರ್ಕಾರಿ ನೌಕರರಿಗೆ ಹಮ್ಮಿಕೊಂಡಿದ್ದ ಕೆಲಸದ ಸ್ಥಳಗಳಲ್ಲಿ ಮಹಿಳೆಯರ ಮೇಲೆ ನಡೆಯುವ ಲೈಂಗಿಕ ಹಾಗೂ ಮಾನಸಿಕ ಕಿರುಕುಳದಿಂದ ಮಹಿಳೆಯರ ರಕ್ಷಣೆ ಕುರಿತು ಅಧಿಕಾರಿಗಳು, ಸಿಬ್ಬಂದಿ ಮತ್ತು ಆಂತರಿಕ ದೂರು ನಿವಾರಣಾ ಸಮಿತಿಯ ಅಧ್ಯಕ್ಷರು, ಸಿಬ್ಬಂದಿಗಾಗಿ ಏರ್ಪಡಿಸಿದ್ದ ಒಂದು ದಿನದ ಕಾನೂನು ಅರಿವು ಕಾರ್ಯಾಗಾರದ ಅಧ್ಯಕ್ಷತೆ ವಹಿಸಿ ಅವರು ಮಾತನಾಡಿದರು.

ಕೆಲಸದ ಸ್ಥಳಗಳಲ್ಲಿ ಮಹಿಳೆಯರ ಮೇಲೆ ನಡೆಯುವ ಮಾನಸಿಕ ಮತ್ತು ದೈಹಿಕ ಕಿರುಕುಳಗಳನ್ನು ತಡೆಯುವ ದೃಷ್ಟಿಯಿಂದ ಪಾಶ್ 2013 ಕಾಯಿದೆಯನ್ನು ರಚಿಸಿದೆ. ಆದರೆ, ಇಂತಹ ಮಹತ್ವದ ಮತ್ತು ಗಂಭೀರ ಕಾಯಿದೆ ಬಗ್ಗೆ ಸಂಬಂಧಪಟ್ಟ ಮಹಿಳಾ ಸಿಬ್ಬಂದಿಗೆ ಮಾಹಿತಿ ಕೊರತೆ ಇದೆ. ಅದರಲ್ಲೂ ರಾಜ್ಯದಲ್ಲಿನ ಜಿಲ್ಲಾಡಳಿತಗಳ ಕಚೇರಿಗಳಲ್ಲೇ ಈ ಕಾಯಿದೆ ಅನ್ವಯ ಮಹಿಳೆಯರ ಆಂತರಿಕ ದೂರು ನಿವಾರಣಾ ಸಮಿತಿಗಳು ರಚನೆಯಾಗದಿರುವುದು ಜಿಲ್ಲಾಡಳಿತಗಳಿಗೆ ಮಹಿಳೆಯರ ಕುರಿತು ಇರುವ ನಿರಾಸಕ್ತಿಯ ಪಾರದರ್ಶಕತೆಯನ್ನು ಎತ್ತಿ ತೋರಿಸುತ್ತದೆ ಎಂದರು.

> ಈ ಕಾಯಿದೆಯನ್ನು ಸರ್ವೋಚ್ಚ ನ್ಯಾಯಾಲಯವೂ ಅತ್ಯಂತ ಗಂಭೀರವಾಗಿ ಪರಿಗಣಿಸಿದೆ. ಆದರೂ ಜಿಲ್ಲಾ ಮಟ್ಟದ ಸರಕಾರಿ ಕಚೇರಿಗಳಲ್ಲೇ ಈ ದೂರು ಸಮಿತಿಗಳು ರಚನೆಯಾಗದಿರುವುದು ದುರದೃಷ್ಟಕರ. ಕೂಡಲೇ ಜಿಲ್ಲಾಡಳಿತಗಳು ಈ ನಿಷ್ಕ್ರಿಯತೆಯಿಂದ ಹೊರ ಬಂದು ಸಮಿತಿಗಳನ್ನು ರಚಿಸಬೇಕು.
>
> **-ಡಾ.ನಾಗಲಕ್ಷ್ಮಿ ಚೌದರಿ** ರಾಜ್ಯ ಮಹಿಳಾ ಆಯೋಗದ ಅಧ್ಯಕ್ಷೆ

ರಾಜ್ಯ ಮಹಿಳಾ ಆಯೋಗದ ಕಾರ್ಯದರ್ಶಿ ಆರ್.ಲತಾ ಮಾತನಾಡಿದರು. ಈ ಸಂದರ್ಭದಲ್ಲಿ ಜಿಲ್ಲಾ ಪಂಚಾಯತ್ ಮುಖ್ಯ ಕಾರ್ಯನಿರ್ವಹಕಾಧಿಕಾರಿ ಪ್ರಕಾಶ್ ಜಿ.ಟಿ ನಿಟ್ಟಾಲಿ, ಜಿಲ್ಲಾ ಪೊಲೀಸ್ ವರಿಷ್ಠಾಧಿಕಾರಿ ಕುಶಲ್ ಚೌಕ್ಸೆ, ಅಪರ ಜಿಲ್ಲಾಧಿಕಾರಿ ಡಾ. ಎನ್.ಭಾಸ್ಕರ್, ಸಂಪನ್ಮೂಲ ವ್ಯಕ್ತಿಗಳಾಗಿ ಸುಪ್ರೀಂ ಕೋರ್ಟ್ ಹಿರಿಯ ವಕೀಲ ರಿಷಿ ಮದನ್, ಬೆಂಗಳೂರು ಕ್ರೈಸ್ಟ್ ಯುನಿವರ್ಸಿಟಿ ಡಾ. ಎನ್ ಸ್ವಪ್ನ, ಬೆಂಗಳೂರು ಆಡಳಿತ ಸಿ.ಐ.ಡಿ ಘಟಕದ ಸಿ.ಜಿ ರೋಹಿತ್ ಇದ್ದರು.

ಭ್ರಷ್ಟಾಚಾರ ನಿರ್ಮೂಲನೆಯಾಗಲಿ

ತುಮಕೂರು: ಸಮಾಜದ ಒಳಿತಿಗಾಗಿ ಅಧಿಕಾರಿಗಳು ಕರ್ತವ್ಯ ನಿರ್ವಹಿಸುವ ಮೂಲಕ ಭ್ರಷ್ಟಾಚಾರ ನಿರ್ಮೂಲನೆ ಮಾಡಬೇಕು ಎಂದು ಪ್ರಧಾನ ಜಿಲ್ಲಾ ಮತ್ತು ಸತ್ರ ನ್ಯಾಯಾಧೀಶ ಹಾಗೂ ಜಿಲ್ಲಾ ಕಾನೂನು ಸೇವೆಗಳ ಪ್ರಾಧಿಕಾರದ ಅಧ್ಯಕ್ಷ ಬಿ. ಜಯಂತ ಕುಮಾರ್ ಕರೆ ನೀಡಿದರು.

ಕರ್ನಾಟಕ ಲೋಕಾಯುಕ್ತ ವತಿಯಿಂದ ನಗರ ಕೇಂದ್ರ ಗ್ರಂಥಾಲಯದಲ್ಲಿ ಹಮ್ಮಿಕೊಂಡಿದ್ದ ಭ್ರಷ್ಟಾಚಾರ ವಿರುದ್ಧ ಜಾಗೃತಿ ಅರಿವು ಸಪ್ತಾಹ ಕಾರ್ಯಕ್ರಮದ ಉದ್ಘಾಟನೆ ನೆರವೇರಿಸಿ ಮಾತನಾಡಿದ ಅವರು, ದೇಶ ಮತ್ತು ಸಮಾಜಕ್ಕಾಗಿ ಸೇವೆ ಸಲ್ಲಿಸುವ ಅಮೂಲ್ಯ ಅವಕಾಶ ಸರಕಾರಿ ನೌಕರರಿಗೆ ದೊರಕಿರುವುದರಿಂದ ಪ್ರತಿಯೊಬ್ಬ ಸರಕಾರಿ ನೌಕರನೂ ಸಹ ಪ್ರಾಮಾಣಿಕವಾಗಿ ಜನರಿಗೆ ಸರಕಾರಿ ಸೌಲಭ್ಯಗಳನ್ನು ನೀಡಬೇಕು. ಯಾವುದೇ ಆಸೆ ಆಕಾಂಕ್ಷೆಗಳಿಗೂ ಬಲಿಯಾಗದೆ, ನೈತಿಕತೆಯಿಂದ ತಮ್ಮ ಕರ್ತವ್ಯವನ್ನು ನಿರ್ವಹಿಸಿದಾಗ ಮಾತ್ರ ನಮ್ಮ ವ್ಯಕ್ತಿತ್ವ ಮತ್ತು ನಮ್ಮ ಹೆಸರು ಜನ ಮಾನಸದಲ್ಲಿ ಉಳಿದುಕೊಳ್ಳುತ್ತದೆ. ಅಧಿಕಾರಿ ಮತ್ತು ಸಾರ್ವಜನಿಕರ ಸಹಕಾರದಿಂದ ಮಾತ್ರ ಭ್ರಷ್ಟಾಚಾರವನ್ನು ನಿರ್ಮೂಲನೆ ಮಾಡಿ ಆರೋಗ್ಯವಂತ ಸಮಾಜ ನಿರ್ಮಾಣ ಮಾಡಲು ಸಾಧ್ಯವಾಗುತ್ತದೆ ಎಂದು ತಿಳಿಸಿದರು.

ಲೋಕಾಯುಕ್ತ ವತಿಯಿಂದ ಭ್ರಷ್ಟಾಚಾರ ವಿರುದ್ಧ ಜಾಗ್ರತಿ ಅರಿವು ಸಪ್ತಾಹ ಕಾರ್ಯಕ್ರಮ ಹಮ್ಮಿಕೊಳ್ಳಲಾಗಿತ್ತು.

> ಮನುಷ್ಯನನ್ನು ಹೊರತುಪಡಿಸಿ ಪ್ರಪಂಚದ ಎಲ್ಲಾ ವಸ್ತು ಮತ್ತು ಪ್ರಾಣಿಗಳಿಗೆ ಬೆಲೆ ಇದೆ. ಬೆಲೆ ಕಟ್ಟಲು ಸಾಧ್ಯವಾಗದ ನಾವು ನೈತಿಕತೆಯನ್ನು ಬಿಟ್ಟು ದಾರಿ ತಪ್ಪದೆ ಬದ್ಧತೆಯಿಂದ ಕೆಲಸ ಮಾಡಬೇಕು.
>
> **-ಬಿ.ಜಯಂತಕುಮಾರ್** ನ್ಯಾಯಾಧೀಶ

7ನೇ ಅಧಿಕ ಜಿಲ್ಲಾ ಮತ್ತು ಸತ್ರ ನ್ಯಾಯಾಧೀಶರು ಹಾಗೂ ಲೋಕಾಯುಕ್ತ ವಿಶೇಷ ನ್ಯಾಯಾಧೀಶ ಟಿ.ಪಿ. ರಾಮಲಿಂಗೇಗೌಡ ಮಾತನಾಡಿ, ಸಾರ್ವಜನಿಕರ ಸೇವೆಗಾಗಿ ನೇಮಕಗೊಂಡ ಸರಕಾರಿ ಅಧಿಕಾರಿಗಳು ಭ್ರಷ್ಟಾಚಾರ ನಿರ್ಮೂಲನೆ ಮಾಡುವ ಪಣ ತೊಡಬೇಕು ಎಂದು ತಿಳಿಸಿದರು.

ಕಾರ್ಯಕ್ರಮದಲ್ಲಿ ಹಿರಿಯ ಸಿವಿಲ್ ನ್ಯಾಯಾಧೀಶರು ಮತ್ತು ಜಿಲ್ಲಾ ಕಾನೂನು ಸೇವಾ ಪ್ರಾಧಿಕಾರ ಸದಸ್ಯ ಕಾರ್ಯದರ್ಶಿ ನೂರುನ್ನಿಸಾ, ತುಮಕೂರು ಲೋಕಾಯುಕ್ತ ಪೊಲೀಸ್ ಅಧೀಕ್ಷಕ ಎ.ವಿ. ಲಕ್ಷ್ಮೀನಾರಾಯಣ, ಅಪರ ಜಿಲ್ಲಾಧಿಕಾರಿ ಡಾ. ಎನ್. ತಿಪ್ಪೇಸ್ವಾಮಿ, ಉಪವಿಭಾಗಾಧಿಕಾರಿ ಗೌರವ್ ಕುಮಾರ್ ಶೆಟ್ಟಿ, ತಹಶೀಲ್ದಾರ್ ರಾಜೇಶ್ವರಿ ಸೇರಿದಂತೆ ಜಿಲ್ಲೆಯ ವಿವಿಧ ಇಲಾಖೆಯ ಅಧಿಕಾರಿಗಳು ಪಾಲ್ಗೊಂಡಿದ್ದರು.

ತಲೆಸುತ್ತು, ಕಣ್ಣು ಕತ್ತಲೆ ಸ್ಟ್ರೋಕ್ ಮುನ್ಸೂಚನೆ

ಕೋಲಾರ: ತಲೆಸುತ್ತುವುದು ಮತ್ತು ಕಣ್ಣು ಕತ್ತಲೆ ಸಮಸ್ಯೆ ಪಾರ್ಶ್ವವಾಯು ಮುನ್ಸೂಚನೆ ಎಂದು ಜಿಲ್ಲಾ ಮಾನಸಿಕ ರೋಗ ನಿವಾರಣಾಧಿಕಾರಿ ಡಾ.ಎನ್.ಸಿ.ನಾರಾಯಣಸ್ವಾಮಿ ಹೇಳಿದರು.

ಆರೋಗ್ಯ ಇಲಾಖೆಯಿಂದ ನಗರದ ಎಸ್ನೆನ್ನಾರ್ ಆಸ್ಪತ್ರೆಯಲ್ಲಿ ನಡೆದ ಸ್ಟ್ರೋಕ್ ದಿನಾಚರಣೆ ಜಾಗೃತಿ ಜಾಥಾ ಉದ್ಘಾಟಿಸಿ ಮಾತನಾಡಿ, ಸ್ಟ್ರೋಕ್ ಆದ ತಕ್ಷಣ ಗಿಡಮೂಲಿಕೆ ಅಥವಾ ನಾಟಿ ಮದ್ದು ಎಂದು ಸಮಯಹರಣ ಮಾಡಿಕೊಂಡು ರೋಗ ಉಲ್ಬಣ ಆದಾಗ ಅಂತಿಮವಾಗಿ ಆಸ್ಪತ್ರೆಗೆ ಬರುತ್ತಿರುವ ಜನರ ನಿಲುವಿನಿಂದಾಗಿ ಸಾವು,ನೋವಿನ ಸಂಖ್ಯೆ ಹೆಚ್ಚಾಗುತ್ತಿದೆ ಎಂದು ವಿಷಾಧಿಸಿದರು. ರೋಗಿಯಪ್ರಾಣಕ್ಕೆ ಕಂಠಕ ಬರುತ್ತದೆ ಎಂದು ಎಚ್ಚರಿಸಿದರು.

ಜಿಲ್ಲಾ ಶಸ್ತ್ರಚಿಕಿತ್ಸಕಿ ಡಾ.ಕೆ.ಎಸ್.ಮಮತ, ಡಾ.ಜೋಸ್ನಾಸೌಮ್ಯ, ಡಾ.ಮೋನಿಕಾ,ಡಾ.ಶಿಲ್ಪಾ ಇದ್ದರು.

ಕೋಲಾರದ ಎಸ್ನೆನ್ನಾರ್ ಆಸ್ಪತ್ರೆಯಲ್ಲಿ ಕೋಲಾರದಲ್ಲಿ ಪಾರ್ಶ್ವವಾಯು ದಿನಾಚರಣೆ ನಡೆಯಿತು.

ಗೃಹ ಆರೋಗ್ಯಕ್ಕೆ ಒತ್ತು

ಕೋಲಾರ ಜಿಲ್ಲೆಯಲ್ಲಿ 470 ಪಾರ್ಶ್ವವಾಯು ರೋಗಿಗಳಿಗೆ ಚಿಕಿತ್ಸೆ ನೀಡಲಾಗುತ್ತಿದ್ದು ಫಿಜಿಯೋಥೆರಪಿ ಮೂಲಕ ಸಮಸ್ಯೆಯನ್ನು ನಿಯಂತ್ರಣದಲ್ಲಿಡಲಾಗಿದೆ. ಉಪ್ಪು-ಖಾರ,ಎಣ್ಣೆ ಕಡಿಮೆ ಮಾಡುವ ಜತೆಗೆ ಕರಿದ ಪದಾರ್ಥಗಳನ್ನು ಸೇವಿಸಬಾರದು. ಗೃಹ ಆರೋಗ್ಯ ಕಾರ್ಯಕ್ರಮದ ಮೂಲಕ ನಾಲ್ವರು ಸಿಬ್ಬಂದಿ ಮನೆಗೆ ತೆರಳಿ ಉಚಿತವಾಗಿ ಬಿಪಿ,ಶುಗರ್, ಕ್ಯಾನ್ಸರ್ ತಪಾಸಣೆ ಮಾಡಿ ಅಗತ್ಯವಿದ್ದಲ್ಲಿ ಒಂದು ತಿಂಗಳಿಗೆ ಮಾತ್ರೆಗಳನ್ನು ಕೊಟ್ಟು ಬರುವ ವ್ಯವಸ್ಥೆ ಆರಂಭಿಸಲಾಗಿದೆ ಎಂದು ಜಿಲ್ಲಾ ಮಾನಸಿಕ ರೋಗ ನಿವಾರಣಾಧಿಕಾರಿ ಡಾ.ಎನ್.ಸಿ.ನಾರಾಯಣಸ್ವಾಮಿ ಮಾಹಿತಿ ನೀಡಿದರು.

ಸರಕಾರಿ ನೌಕರರ ಸಂಘಕ್ಕೆ ನಿರ್ದೇಶಕರ ಆಯ್ಕೆ

ಬಾಗೇಪಲ್ಲಿ: ತಾಲೂಕು ಸರಕಾರಿ ನೌಕರರ ಸಂಘದ 3 ಕ್ಷೇತ್ರಗಳ 6 ನಿರ್ದೇಶಕ ಸ್ಥಾನಗಳಿಗೆ ಚುನಾವಣೆ ಹಾಗೂ ಫಲಿತಾಂಶ ಸೋಮ ವಾರ ತಡರಾತ್ರಿ ಪಟ್ಟಣದ ಬಾಲಕಿಯರ ಸರಕಾರಿ ಶಾಲೆಯಲ್ಲಿ ನಡೆಯಿತು.

ಪ್ರಾಥಮಿಕ ಶಾಲಾ ಮತಕ್ಷೇತ್ರದ ಪೈಕಿ ಎಂ.ವಿ. ರಂಗಾರೆಡ್ಡಿ 253 ಮತಗಳು, ಕದಿರಪ್ಪ 192 ಮತಗಳು, ಶಿವಣ್ಣ 190 ಮತಗಳು ಸಮಾಜ ಕಲ್ಯಾಣ ಇಲಾಖೆ ಹಾಗೂ ಹಿಂದುಳಿದ ವರ್ಗಗಳ ಕಲ್ಯಾಣ ಇಲಾಖೆಯ ಕ್ಷೇತ್ರದಿಂದ ಬಿಸಿಎಂನ ಅ.ಶಿವಪ್ಪ 25 ಮತಗಳು ಗೋಪಿನಾಯಕ 25 ಮತಗಳು ಹಾಗೂ ತಾಂತ್ರಿಕ ಶಿಕ್ಷಣ ಕ್ಷೇತ್ರದಿಂದ ಆರ್. ವೀಣಾಪಾಣಿ 8 ಮತಗಳು ಪಡೆದು ಗೆಲುವು ಸಾಧಿಸಿದ್ದಾರೆ.

ಪ್ರಾಥಮಿಕ ಶಾಲಾ ಮತಕ್ಷೇತ್ರದ ಪೈಕಿ ಎಂ.ವಿ. ರಂಗಾರೆಡ್ಡಿ 253 ಮತಗಳು ಮತಗಳು ಪಡೆದು ಗೆಲುವು ಸಾಧಿಸಿದ್ದಾರೆ.

ಈ ಸಂದರ್ಭದಲ್ಲಿ ಕರ್ನಾಟಕ ರಾಜ್ಯ ಸರ್ಕಾರಿ ನೌಕರರ ಸಂಘದ ತಾಲ್ಲೂಕು ಶಾಖೆ ಚುನಾವಣೆ ಅಧಿಕಾರಿಗಳಾದ ಆರ್.ವೆಂಕಟರಾಮಪ್ಪ ಮಾತನಾಡಿ ಕರ್ನಾಟಕ ರಾಜ್ಯ ಸರ್ಕಾರಿ ನೌಕರರ ಸಂಘದ 2024 – 2029 ಅವಧಿಯ ಚುನಾವಣೆ ಹಾಗೂ ಫಲಿತಾಂಶ ಯಾವುದೇ ಗೊಂದಲಗಳು ಇಲ್ಲದೇ ಶಾಂತಿಯುತವಾಗಿ ಚುನಾವಣೆ ನಡೆದಿದೆ ಎಂದು ತಿಳಿಸಿದರು.

ಸಹ ಚುನಾವಣೆ ಅಧಿಕಾರಿಗಳಾದ ಎಂ.ಎಲ್.ಮಂಜುನಾಥ್ ಇದ್ದರು.

ನ.1ರಂದು 69ನೇ ಕನ್ನಡ ರಾಜ್ಯೋತ್ಸವ

ತುಮಕೂರು: ಜಿಲ್ಲಾಡಳಿತದ ವತಿಯಿಂದ ನವೆಂಬರ್ 1ರಂದು ಬೆಳಗ್ಗೆ 9 ಗಂಟೆಗೆ ನಗರದ ಮಹಾತ್ಮಗಾಂಧಿ ಕ್ರೀಡಾಂಗಣದಲ್ಲಿ 69ನೇ ಕನ್ನಡ ರಾಜ್ಯೋತ್ಸವ-2024 ಕಾರ್ಯಕ್ರಮವನ್ನು ಹಮ್ಮಿಕೊಳ್ಳಲಾಗಿದೆ. ರೈಲ್ವೆ ಮತ್ತು ಜಲಶಕ್ತಿ ರಾಜ್ಯ ಖಾತೆ ಸಚಿವ ವಿ.ಸೋಮಣ್ಣ ಘನ ಉಪಸ್ಥಿತಿಯಲ್ಲಿ ಜಿಲ್ಲಾ ಉಸ್ತುವಾರಿ ಸಚಿವ ಡಾ: ಜಿ. ಪರಮೇಶ್ವರ ಬೆಳಿಗ್ಗೆ 9 ಗಂಟೆಗೆ ಧ್ವಜಾರೋಹಣ ನೆರವೇರಿಸಿ ಗೌರವರಕ್ಷೆ ಸ್ವೀಕರಿಸುವರು. ಶಾಸಕ ಜಿ.ಬಿ. ಜ್ಯೋತಿಗಣೇಶ್ ಅಧ್ಯಕ್ಷತೆವಹಿಸುವರು. ಕಾರ್ಯಕ್ರಮದಲ್ಲಿ ವಿವಿಧ ಜನಪ್ರತಿನಿಧಿಗಳು, ಅಧಿಕಾರಿಗಳು ಪಾಲ್ಗೊಳ್ಳುವರು. ರಾಜ್ಯೋತ್ಸವದ ಅಂಗವಾಗಿ ಧ್ವಜಾರೋಹಣ ಕಾರ್ಯಕ್ರಮಕ್ಕೂ ಮುನ್ನ ಅಂದು ಬೆಳಗ್ಗೆ 7.30 ಗಂಟೆಗೆ ಬಿ.ಜಿ.ಎಸ್. ವೃತ್ತದಿಂದ ತಾಯಿ ಭುವನೇಶ್ವರಿ ಭಾವಚಿತ್ರವನ್ನು ಅಲಂಕೃತ ಬೆಳ್ಳಿ ರಥದಲ್ಲಿ ಮೆರವಣಿಗೆ ಏರ್ಪಡಿಸಲಾಗಿದೆ. ಶಾಲಾ-ಕಾಲೇಜು ವಿದ್ಯಾರ್ಥಿಗಳು, ಸರಕಾರಿ ಅಧಿಕಾರಿಗಳು, ನೌಕರರು, ಆಹ್ವಾನಿತರು ಮತ್ತು ಸಾರ್ವಜನಿಕರು ಸಮಾರಂಭದ ಸ್ಥಳದಲ್ಲಿ ಬೆಳಗ್ಗೆ 8.30 ಗಂಟೆಗೆ ಸೇರಬೇಕು. ನಂತರ ಬೆ.9 ಗಂಟೆಗೆ ಸಚಿವರು ಧ್ವಜಾರೋಹಣ ನೆರವೇರಿಸಿ, ಬೆಳಿಗ್ಗೆ 10 ಗಂಟೆಗೆ ಸಾಂಸ್ಕೃತಿಕ ಕಾರ್ಯಕ್ರಮಗಳು ಜರುಗಲಿವೆ. ಸಂಜೆ 4.30 ರಿಂದ 7.30ರವರೆಗೆ ನಗರದ ಗುಬ್ಬಿ ವೀರಣ್ಣ ಕಲಾಕ್ಷೇತ್ರದಲ್ಲಿ ವಿವಿಧ ಕ್ಷೇತ್ರಗಳಲ್ಲಿ ಗಣನೀಯ ಸೇವೆ ಸಲ್ಲಿಸಿದ ಸಾಧಕರಿಗೆ ಗೌರವನ್ನು ನೀಡಲಾಗುವುದು.

ಗ್ರಾಪಂ ಅಧ್ಯಕ್ಷರಾಗಿ ವಿದ್ಯಾನಾರಾಯಣ್

ಕೆ.ಆರ್.ನಗರ: ತಾಲೂಕಿನ ಹಂಪಾಪುರ ಗ್ರಾಮ ಪಂಚಾ ಯಿತಿ ಅಧ್ಯಕ್ಷರಾಗಿ ವಿದ್ಯಾನಾರಾಯಣ್ ಅವಿರೋಧವಾಗಿ ಆಯ್ಕೆಯಾದರು. ಈವರೆಗೆ ಅಧ್ಯಕ್ಷರಾಗಿದ್ದ ರಮ್ಯ ಮಂಜುನಾಥ್ ರವರ ರಾಜೀನಾಮೆಯಿಂದ ತೆರವಾದ ಸ್ಥಾನಕ್ಕೆ ಗ್ರಾಮ ಪಂಚಾಯಿತಿ ಆಡಳಿತ ಕಚೇರಿಯಲ್ಲಿ ಚುನಾವಣೆ ನಡೆಸಲಾಯಿತು. 18 ಮಂದಿ ಸದಸ್ಯರನ್ನು ಹೊಂದಿರುವ ಹಂಪಾಪುರ ಗ್ರಾ.ಪಂನಲ್ಲಿ ವಿದ್ಯಾನಾರಾ ಯಣ್ ಹೊರತುಪಡಿಸಿ ಅಧ್ಯಕ್ಷ ಸ್ಥಾನಕ್ಕೆ ಬೇರಾರು ನಾಮಪತ್ರ ಸಲ್ಲಿಸದಿದ್ದರಿಂದ ಚುನಾವಣಾಧಿಕಾರಿಯಾಗಿದ್ದ ಸಿಡಿಪಿಒ ಸಿ.ಎಂ.ಅಣ್ಣಯ್ಯ ಇವರ ಅವಿರೋಧ ಆಯ್ಕೆ ಯನ್ನು ಪ್ರಕಟಿಸಿದರು. ಸದಸ್ಯ ಎಂ.ಮಾನಸ ಗೈರು ಹಾಜರಾಗಿದ್ದರು. ಚುನಾವಣಾ ಸಭೆಯಲ್ಲಿ ಉಪಾಧ್ಯಕ್ಷ ಎಂ.ಬಿ.ಲೋಕೇಶ್, ಸದಸ್ಯರಾದ ಹೆಚ್.ಡಿ.ನಾಗೇಶ್, ಮಹದೇವಕುಮಾರ್, ಕೆ.ಎಸ್.ಚೈತ್ರ, ಹೆಚ್.ಕೆ.ನಾಗ ರಾಜು, ಗೌರಮ್ಮ, ಹರಿರಾಜು, ಕಲಾವತಿ, ಆರ್.ಜಿ.ನಾ ಗಮಣಿ, ಹೆಚ್.ಎಸ್.ರಾಮೇಗೌಡ, ಕಾರ್ತಿಕ್, ಎಸ್.ವೈ.ಸೌಮ್ಯ, ಎಂ.ಎಸ್.ರವಿಕುಮಾರ್, ಬಿ.ಎನ್. ರೇವಣ್ಣ, ಎಂ.ಎಸ್.ಗಿರೀಶ್, ಪಂಚಾಯಿತಿ ಅಭಿವೃದ್ಧಿ ಅಧಿಕಾರಿ ವಿ.ಎ.ಅಶ್ವಿನಿ, ಕಾರ್ಯದರ್ಶಿ ಭಾರತಿ ಹಾಜರಿದ್ದರು. ನೂತನ ಅಧ್ಯಕ್ಷರ ಆಯ್ಕೆ ಪ್ರಕಟಗೊಳ್ಳುತ್ತಿದ್ದಂತೆ ಪಂಚಾಯಿತಿ ಸದಸ್ಯರು, ಅಧ್ಯಕ್ಷರ ಬೆಂಬಲಿಗರು ಪಟಾಕಿ ಸಿಡಿಸಿ, ಸಿಹಿ ವಿತರಿಸಿ ಸಂಭ್ರಮಿಸಿದರು. ಹಂಪಾಪುರ ಪ್ರಾಥಮಿಕ ಕೃಷಿ ಪತ್ತಿನ ಸಹಕಾರ ಸಂಘದ ಅಧ್ಯಕ್ಷ ಹೆಚ್.ಪಿ.ಪ್ರಶಾಂತ್, ನಿರ್ದೇಶಕ ಪಿ.ಎಸ್.ದೇವರಾಜು, ಮಾಜಿ ಸದಸ್ಯ ಬಸವರಾಜು, ಮುಖಂಡರಾದ ಪರಶುರಾಮ್ ಹಾಜರಿದ್ದರು.

{ ಬಿ.ವೈ.ವಿಜಯೇಂದ್ರ } ಬಿಜೆಪಿ ರಾಜ್ಯಾಧ್ಯಕ್ಷ

ಅಲ್ಪಸಂಖ್ಯಾತರನ್ನು ಎತ್ತಿಕಟ್ಟುವ, ಈ ದೇಶವನ್ನು ಜಾತಿ, ಧರ್ಮದ ಆಧಾರದಲ್ಲಿ ವಿಭಜಿಸುವ ಕೆಲಸವನ್ನು ಕಾಂಗ್ರೆಸ್ ಪಕ್ಷ ಹಿಂದಿನಿಂದಲೂ ಮಾಡುತ್ತಾ ಬಂದಿದೆ. ಅದೇ ನಿಟ್ಟಿನಲ್ಲಿ ಜಮೀರ್ ಅಹ್ಮದ್ ನೇತೃತ್ವದಲ್ಲಿ ಇವತ್ತು ರಾಜ್ಯದಲ್ಲಿ ಬೆಂಕಿ ಹಚ್ಚುವ ಕೆಲಸ ನಡೆದಿದೆ.



ಭಾರತೀಯ ಸ್ಟೇಟ್ ಬ್ಯಾಂಕ್
ಆವರಣ ಮತ್ತು ಸಂಪದ ವಿಭಾಗ
ಸ್ಥಳೀಯ ಪ್ರಧಾನ ಕಛೇರಿ
IIನೇ ಮಹಡಿ, ಅನೆಕ್ಸ್ ಬಿಲ್ಡಿಂಗ್
ನಂ.65, ಸಂತ ಮಾರ್ಕರ ರಸ್ತೆ
ಬೆಂಗಳೂರು 560 001

SBI The banker to every indian

ಟೆಂಡರ್ ಆಮಂತ್ರಿಸುವ ಸೂಚನೆ

ಭಾರತೀಯ ಸ್ಟೇಟ್ ಬ್ಯಾಂಕ್ 2025ನೇ ಸಾಲಿನ ಬ್ಯಾಂಕ್ ಉಪಯೋಗಕ್ಕಾಗಿ ಒಟ್ಟು ವೆಚ್ಚದ ಆಧಾರದ ಮೇಲೆ ಕ್ಯಾಲೆಂಡರ್‌ಗಳ ಮುದ್ರಣ ಮತ್ತು ವಿತರಣೆಗಾಗಿ ಈ ಮೊದಲು ಸಾರ್ವಜನಿಕ ವಲಯದ ಉದ್ಯಮ/ವಾಣಿಜ್ಯಿಕ ಬ್ಯಾಂಕ್‌ಗಳಿಗಾಗಿ ಯಶಸ್ವಿಯಾಗಿ ಮುದ್ರಿಸಿಕೊಟ್ಟಿರುವ ಕರ್ನಾಟಕ ಮೂಲದ ಮುದ್ರಕರಿಂದ ಎರಡು ಬಿಡ್ ವ್ಯವಸ್ಥೆಯಲ್ಲಿ ಇ-ಟೆಂಡರನ್ನು ಆಹ್ವಾನಿಸಿದೆ. ಹೆಚ್ಚಿನ ವಿವರಗಳಿಗಾಗಿ ದಯವಿಟ್ಟು ಭಾರತೀಯ ಸ್ಟೇಟ್ ಬ್ಯಾಂಕ್ ಅಡಿಯಲ್ಲಿ ನಮ್ಮ ವೆಬ್ ಸೈಟ್ www.bank.sbi>SBI in the News> Procurement News ಗೆ ಲಾಗಿನ್ ಆಗಿ, ಅಥವಾ ಆವರಣ ಮತ್ತು ಸಂಪದ ವಿಭಾಗ, ಸ್ಥಳೀಯ ಪ್ರಧಾನ ಕಛೇರಿ, ಬೆಂಗಳೂರು 080-25944120 ಸಂಪರ್ಕಿಸಿ. ಬ್ಯಾಂಕ್ ಯಾವುದೇ ಕಾರಣವನ್ನು ನೀಡದೆ ಯಾವುದೇ/ಎಲ್ಲಾ ಟೆಂಡರ್‌ಗಳನ್ನು ಸ್ವೀಕರಿಸುವ / ತಿರಸ್ಕರಿಸುವ ಹಕ್ಕನ್ನು ಕಾಯ್ದಿರಿಸಿದೆ. ಬಿಡ್ ಸಲ್ಲಿಸಲು ಕೊನೆಯ ದಿನಾಂಕ 20.11.2024 ಮಧ್ಯಾಹ್ನ 3.00 ಘಂಟೆಯವರೆಗೆ.

ಸಹಾಯಕ ಪ್ರಧಾನ ವ್ಯವಸ್ಥಾಪಕರು,
ಆವರಣ ಮತ್ತು ಸಂಪದ ವಿಭಾಗ
ಸ್ಥಳೀಯ ಪ್ರಧಾನ ಕಛೇರಿ, ಬೆಂಗಳೂರು

ಕರ್ನಾಟಕ ಸರ್ಕಾರ
ಉಪ ಅರಣ್ಯ ಸಂರಕ್ಷಣಾಧಿಕಾರಿಗಳ ಕಚೇರಿ, ಸಾಮಾಜಿಕ ಅರಣ್ಯ ವಿಭಾಗ, ಕಾರವಾರ
ಕೋಡಿಭಾಗ, ಸಾಗರದರ್ಶನ ಕಲ್ಯಾಣ ಮಂಟಪ ಎದುರುಗಡೆ, ಕಾರವಾರ, ಉ.ಕ-581303
ದೂರವಾಣಿ: 08382-296176 ಇ-ಮೇಲ್: dcfsfkwr@gmail.com
ನಂ. ಎ4/ಕಟ್ಟಡ/ವಿವ/ಇ-ಟೆಂಡರ್/2024-25/595 ದಿನಾಂಕ: 28-10-2024

ಪತ್ರಿಕಾ ಪ್ರಕಟಣೆ

2024-25ನೇ ಸಾಲಿಗೆ ಕಾರವಾರ ಸಾಮಾಜಿಕ ಅರಣ್ಯ ವಿಭಾಗದ ಅಧೀನ ವಲಯಗಳ ವಲಯ ಕಚೇರಿ ಹಾಗೂ ವಸತಿಗೃಹ ಕಟ್ಟಡ ನಿರ್ಮಾಣದ ಕುರಿತು ಇ-ಪ್ರೊಕ್ಯೂರ್‌ಮೆಂಟ್ ಪೋರ್ಟಲ್ (https://eproc.karnataka.gov.in) ಮೂಲಕ ಇ-ಟೆಂಡರ ಕರೆಯಲಾಗಿರುತ್ತದೆ. ಇ-ಟೆಂಡರ್ ಸ್ವೀಕರಿಸುವ ಕೊನೆಯ ದಿನಾಂಕ: 19-11-2024 ಆಗಿದ್ದು, ಹೆಚ್ಚಿನ ಮಾಹಿತಿಗಾಗಿ ಉಪ ಅರಣ್ಯ ಸಂರಕ್ಷಣಾಧಿಕಾರಿಗಳ ಕಚೇರಿ, ಸಾಮಾಜಿಕ ಅರಣ್ಯ ವಿಭಾಗ, ಕಾರವಾರ ರವರನ್ನು ಸಂಪರ್ಕಿಸುವದು (ದೂರವಾಣಿ ಸಂಖ್ಯೆ: 08382-296176 ಮತ್ತು ಇ-ಮೇಲ್ ವಿಳಾಸ: dcfsfkwr@gmail.com)

ಸಹಿ/- (ಮಂಜುನಾಥ ಜಿ. ನಾವಿ. ಕ.ಅ.ಸೇ)
ಉಪ ಅರಣ್ಯ ಸಂರಕ್ಷಣಾಧಿಕಾರಿ,
ಸಾಮಾಜಿಕ ಅರಣ್ಯ ವಿಭಾಗ, ಜಿಲ್ಲಾ ಪಂಚಾಯತ್, ಕಾರವಾರ

DIPR/KWR/MCA/456/24-25 Dt.29.10.2024

REVENUE COMMISSIONERATE
Room No: 711, 7th Floor, Second Gate, Multi-Storied Building, Dr. B.R. Ambedkar Veedhi,Bangalore - 560001.

No: RC-CFSOADMN(ADM)/120/2024 Date: 29.10.2024

E-TENDER NOTIFICATION

The Tender Schedule is as mentioned below:

Tender Reference No	RCO/SERV01/2024-25
Date from which Bid Document is ready for download through e-procurement portal of Government of Karnataka	30.10.2024
Last date for seeking clarification if any	05.11.2024 @ 11-00 AM
Date of Pre-Bid meeting	05.11.2024 @ 03-00 PM
Last date and time for uploading of tender in e-Procurement platform	11.11.2024 up to 17-30 PM
Date and Time of opening of tenders: Technical Bid & Technical Evaluation	13.11.2024 @ 11-00 PM
Date and Time of opening of Tenders: Commercial Bid	16.11.2024 @ 11-00 PM
Contact Person for Queries	Tahsildar, Admin, Revenue Commissionerate, Phone No: 080-22032691 E-mail: commrrd@gmail.com
Place of Opening of Tenders and Address for Communication	Revenue Commissionerate, Room No: 711, 7th floor, 2nd Gate, M.S.Building, Dr.B.R.Ambedkar Veedhi, Bengaluru-560001 Phone No: 080-22032691

Note: Completed Tender shall be uploaded through **KPP PORTAL** only in the manner described under instructions to Tenderers of RFP Documents on or before the last date & time stipulated.

Sd/- Tahsildar (Admin),
Revenue Commissionerate

DIPR/CP/SPAN/2820/2024-25

ಕಲ್ಯಾಣ ಕರ್ನಾಟಕ ರಸ್ತೆ ಸಾರಿಗೆ ನಿಗಮ, ವಿಜಯಪುರ ವಿಭಾಗ, ವಿಜಯಪುರ
ಸಂಖ್ಯೆ: ಕಕರಸಾ/ವಿವಿ/ಸಂಚಾರ/ವಾಣಿಜ್ಯ/3067/2024-25 ದಿನಾಂಕ:28.10.2024

ಇ-ಟೆಂಡರ್ ಪ್ರಕಟಣೆ ಸಂಖ್ಯೆ; 713/23/ಇ-21
(ಇ-ಪ್ರೊಕ್ಯೂರ್‌ಮೆಂಟ್ ಮೂಲಕ)

ವಿಜಯಪುರ ವಿಭಾಗದ ವ್ಯಾಪ್ತಿಯಲ್ಲಿ ಬರುವ ಬಸ್ ನಿಲ್ದಾಣಗಳಲ್ಲಿ ಖಾಲಿ ಇರುವ ಹಾಗೂ ಖಾಲಿಯಾಗಲಿರುವ ವಾಣಿಜ್ಯ ಮಳಿಗೆಗಳು / ತೆರೆದ ಸ್ಥಳಗಳು & ಉಪಹಾರ ಗೃಹಗಳಿಗೆ ಇ-ಪ್ರೊಕ್ಯೂರ್‌ಮೆಂಟ್ (ಆನ್‌ಲೈನ್) ಮೂಲಕ ಟೆಂಡರ್ ಆಹ್ವಾನಿಸಲಾಗಿದ್ದು, ದಿನಾಂಕಗಳ ವಿವರ ಈ ಕೆಳಗಿನಂತೆ ಇರುತ್ತವೆ.

1) ಅರ್ಜಿಗಳನ್ನು ಆನ್‌ಲೈನ್‌ನಲ್ಲಿ ಸಲ್ಲಿಸಲು ಕೊನೆಯ **ದಿನಾಂಕ: 11.11.2024 ರ 17.30 ಗಂಟೆಯ ವರೆಗೆ.**

2) ಆನ್‌ಲೈನ್ ಮೂಲಕ ಇ-ಟೆಂಡರ್ ತೆರೆಯುವ **ದಿನಾಂಕ:13.11.2024 ರಂದು ಬೆಳಿಗ್ಗೆ 10.00 ಗಂಟೆಯ ನಂತರ.**

ಟೆಂಡರ್ ಪ್ರಕಟಣೆಯ ಪ್ರತಿಯನ್ನು ಇ-ಪ್ರೊಕ್ಯೂರ್‌ಮೆಂಟ್ ರವರ ಹೊಸ ತಂತ್ರಾಂಶ https://kppp.karnataka.gov.in ದಿಂದ ಪಡೆಯಬಹುದಾಗಿದೆ ಅಥವಾ D.T.O ರವರ ದೂರವಾಣಿ ಸಂಖ್ಯೆ:7760992252 ಗೆ ಕರೆಮಾಡಿ ಪಡೆಯಬಹುದಾಗಿದೆ ಅಥವಾ ವಾಣಿಜ್ಯ ವಿಷಯ ನಿರ್ವಾಹಕರನ್ನು ಕಚೇರಿ ವೇಳೆಯಲ್ಲಿ ಬಂದು ವಿಚಾರಿಸಬಹುದಾಗಿದೆ ವಿಳಾಸ,ಕ.ಕ.ರ.ಸಾ ನಿಗಮ ವಿಜಯಪುರ ವಿಭಾಗದ ವಿಭಾಗೀಯ ಕಚೇರಿ, ಸಂಚಾರ ಶಾಖೆಯಲ್ಲಿ ಬಂದು ವಿಚಾರಿಸಬಹುದಾಗಿದೆ.

ಸಹಿ/- ವಿಭಾಗೀಯ ನಿಯಂತ್ರಣಾಧಿಕಾರಿ,
ಕ.ಕ.ರ.ಸಾ ಸಂಸ್ಥೆ, ವಿಜಯಪುರ ವಿಭಾಗ

ವಾಸಾಸಂಇ/ವಿಜಯಪುರ/362/ಕೆಎಸ್‌ಎಂಸಿಎ/2024-25

ಬೃಹತ್ ಬೆಂಗಳೂರು ಮಹಾನಗರ ಪಾಲಿಕೆ
ಕಾರ್ಯಪಾಲಕ ಅಭಿಯಂತರರ ಕಛೇರಿ, ಮಹಾಲಕ್ಷ್ಮೀಪುರಂ ವಿಭಾಗ,
12ನೇ ಮುಖ್ಯರಸ್ತೆ, 11ನೇ ಅಡ್ಡರಸ್ತೆ, ಪಶ್ಚಿಮ ಕಾರ್ಡ್ ರಸ್ತೆ,
ಬಿಬಿಎಂಪಿ, ಬೆಂಗಳೂರು - 560086

ನಂ.: ಕಾಪಾಅ/ಮಲಪು/ಟೆಂಡರ್/ಇ-ಪ್ರೊಕ್/06/2024-25 ದಿನಾಂಕ: 28.10.2024

ಅಲ್ಪಾವಧಿ ಟೆಂಡರ್ ಪ್ರಕಟಣೆ

(ಜಿಒಕೆ ಇ-ಪ್ರೊಕ್ಯೂರ್‌ಮೆಂಟ್ ಪೋರ್ಟಲ್ ಮೂಲಕ ಮಾತ್ರ)

ಕಾರ್ಯಪಾಲಕ ಅಭಿಯಂತರರು (ಮಹಾಲಕ್ಷ್ಮೀಪುರಂ), ಬಿಬಿಎಂಪಿ, ಬೆಂಗಳೂರು ಇವರು **ಮಹಾಲಕ್ಷ್ಮೀಪುರಂ ವಿಭಾಗದಲ್ಲಿ ಅನಧಿಕೃತ ರಚನೆಗಳು ಮತ್ತು ಕಟ್ಟಡದ ಅನಧಿಕೃತ ಭಾಗವನ್ನು ದರ ಒಪ್ಪಂದದ ಆಧಾರದ ಮೇಲೆ ತೆಗೆದುಹಾಕಲು** ಪ್ರತಿಷ್ಠಿತ ಸಂಸ್ಥೆ / ಏಜೆನ್ಸಿಗಳಿಂದ ಸ್ಪರ್ಧಾತ್ಮಕ ಬಿಡ್‌ಗಳನ್ನು ಆಹ್ವಾನಿಸಿದ್ದಾರೆ.

ಇಎಂಡಿ ಮತ್ತು ಅರ್ಜಿ ಶುಲ್ಕದೊಂದಿಗೆ ಕೇವಲ ಒಂದು ಪ್ರಸ್ತಾವನೆಯನ್ನು ಸಲ್ಲಿಸಬಹುದಾಗಿರುತ್ತದೆ.

ವೇಳಾಪಟ್ಟಿ: (1) ಪ್ರಸ್ತಾವನೆಗಾಗಿ ವಿನಂತಿ (ಆರ್‌ಎಫ್‌ಪಿ) ಮತ್ತು ಕರಡು ಒಪ್ಪಂದ ಸೇರಿದಂತೆ ಬಿಡ್ ದಸ್ತಾವೇಜುಗಳನ್ನು ಕರ್ನಾಟಕ ಸರ್ಕಾರದ ಸಾರ್ವಜನಿಕ ಸಂಗ್ರಹಣೆ ಪೋರ್ಟಲ್ ವೆಬ್‌ಸೈಟ್ **https://kppp.karnataka.gov.in** ನಿಂದ **30.10.2024** ರಿಂದ ಡೌನ್‌ಲೋಡ್ ಮಾಡಿಕೊಳ್ಳಬಹುದು. ಬಿಡ್ ದಸ್ತಾವೇಜಿಗೆ ಸಂಬಂಧಿಸಿದಂತೆ ಎಲ್ಲಾ ಪ್ರಕಟಣೆಗಳು, ಬದಲಾವಣೆಗಳು ಮತ್ತು ತಿದ್ದುಪಡಿಗಳು ಇದ್ದಲ್ಲಿ ಅವುಗಳೆಲ್ಲವನ್ನು ಇ-ಪ್ರೊಕ್ಯೂರ್‌ಮೆಂಟ್ ಪೋರ್ಟಲ್‌ನಲ್ಲಿ ಮಾತ್ರ ಅಪ್‌ಲೋಡ್ ಮಾಡಲಾಗುವುದು. (2) ಪ್ರಶ್ನೆಗಳನ್ನು ಸ್ವೀಕರಿಸಲು ಕೊನೆಯ ದಿನಾಂಕ ಮತ್ತು ಪೂರ್ವಭಾವಿ ಸಭೆ: **04.11.2024ರ ಮಧ್ಯಾಹ್ನ 3:00 ಗಂಟೆಗೆ.** (3) ಟೆಂಡರ್ ಸಲ್ಲಿಸಲು ಕೊನೆಯ ದಿನಾಂಕ: **15.11.2024ರ ಸಂಜೆ 4:00 ಗಂಟೆವರೆಗೆ.** (4) ತಾಂತ್ರಿಕ ಬಿಡ್ ತೆರೆಯುವ ದಿನಾಂಕ: **16.11.2024ರ ಸಂಜೆ 4:30 ಗಂಟೆಗೆ.** (5) ಆರ್ಥಿಕ ಬಿಡ್ ತೆರೆಯುವ ದಿನಾಂಕ: **ನಂತರ ತಿಳಿಸಲಾಗುವುದು.**

ಹೆಚ್ಚಿನ ಮಾಹಿತಿಯನ್ನು ಮೇಲಿನ ಕಛೇರಿಯಿಂದ ಕೆಲಸದ ವೇಳೆಯಲ್ಲಿ (ಮಧ್ಯಾಹ್ನ 3:00 ಗಂಟೆಯಿಂದ ಸಂಜೆ 5:00 ಗಂಟೆವರೆಗೆ) ಅಥವಾ ವೆಬ್‌ಸೈಟ್ **https://kppp.karnataka.gov.in** ನಿಂದ ಪಡೆದುಕೊಳ್ಳಬಹುದು.

ಸಹಿ/- ಕಾರ್ಯಪಾಲಕ ಅಭಿಯಂತರರು,
ಮಹಾಲಕ್ಷ್ಮೀಪುರಂ ವಿಭಾಗ, ಬಿಬಿಎಂಪಿ

ತೆರಿಗೆ ಸಂಗ್ರಹಕ್ಕೆ ಸಂಬಂಧಿಸಿದಂತೆ ಸಿಎಂ ಗರಂ | ನಿಗದಿತ ಪ್ರಮಾಣದಲ್ಲಿ ತೆರಿಗೆ ಸಂಗ್ರಹವಾಗದಿದ್ದರೆ ಕ್ರಮ

ಪ್ರಗತಿಯಿಲ್ಲದಿದ್ದರೆ ವರ್ಗಾವಣೆಯ ಎಚ್ಚರಿಕೆ

ವಿಶ್ವವಾಣಿ ಸುದ್ದಿಮನೆ ಬೆಂಗಳೂರು

ತೆರಿಗೆ ಸಂಗ್ರಹದಲ್ಲಿ ರಾಜ್ಯ ಮುಂದಿದ್ದರೂ, ಈ ವಿಷಯದಲ್ಲಿ ಯಾವ ಅಧಿಕಾರಿಯೂ ನಿರ್ಲಕ್ಷ್ಯ ತೋರುವಂತಿಲ್ಲ. ನಿರೀಕ್ಷಿತ ಪ್ರಗತಿ ಕಾಣಿಸದಿದ್ದರೆ ಬದಲಾಯಿಸಬೇಕಾಗುತ್ತದೆ ಎನ್ನುವ ಸ್ಪಷ್ಟ ಎಚ್ಚರಿಕೆಯನ್ನು ಮುಖ್ಯಮಂತ್ರಿ ಸಿದ್ದರಾಮಯ್ಯ ಅವರು ನೀಡಿದ್ದಾರೆ.

ವಿಧಾನಸೌಧದಲ್ಲಿ ನಡೆದ ವಾಣಿಜ್ಯ ತೆರಿಗೆ ಸಂಗ್ರಹ ಪ್ರಗತಿ ಪರಿಶೀಲನಾ ಸಭೆಯಲ್ಲಿ ಸ್ಪಷ್ಟ ಎಚ್ಚರಿಕೆ ನೀಡಿರುವ ಸಿದ್ದರಾಮಯ್ಯ ಅವರು, ಮುಂದಿನ ದಿನದಲ್ಲಿ ಪ್ರತಿ ತಿಂಗಳ ಕೊನೆಯಲ್ಲಿ ಅಧಿಕಾರಿಗಳೊಂದಿಗೆ ಸಭೆ ನಡೆಸಲಾಗುವುದು. ತೆರಿಗೆ ಸಂಗ್ರಹದಲ್ಲಿ ಪ್ರಗತಿ ಕಾಣದಿದ್ದರೆ ಮುಲಾಜಿಲ್ಲದೇ ಕ್ರಮವಹಿಸಲಾಗುವುದು ಎಂದು ಎಚ್ಚರಿಕೆ ನೀಡಿದ್ದಾರೆ.

